ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 240 RNI Number : KNKAN/25/A2770 11-09-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :240 ರಾಯಚೂರು 11-09-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

'ದೃಢ ಕರ್ನಾಟಕದ ಸಂಕಲ್ಪ – 100 ದಿನಗಳ ಯಶಸ್ವಿ ಪೂರೈಕೆ' ಕಾರ್ಯಕ್ರಮ

ಡಿ.ಕೆ.ಶಿವಕುಮಾರ್ ನೇತೃತ್ವದ ಸರಕಾರ ಸರಿಯಾದ ಹಾದಿಯಲ್ಲಿ ಸಾಗುತ್ತಿದೆ : ಸಿದ್ದರಾಮಯ್ಯ ಮೆಚ್ಚುಗೆ




ಬೆಂಗಳೂರು, ಸೆ.10: ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಿ, ಅವರ ನೇತೃತ್ವದ ಸರಕಾರವು ಇಂದಿಗೆ 100 ದಿನಗಳನ್ನು ಪೂರೈಸಿದೆ. ಅದರ ಜ್ಞಾಪಕಾರ್ಥವಾಗಿ ಸರ್ಕಾರ ಈ ಆಚರಣೆಯನ್ನು ಮಾಡುತ್ತಿದೆ. 100 ದಿನಗಳು, ಇದೊಂದು ಸಂಭ್ರಮಾಚರಣೆಯಲ್ಲ; ಈ 100 ದಿನಗಳಲ್ಲಿ ನಾವು ಸರಿಯಾದ ದಾರಿಯಲ್ಲಿ ನಡೆಯುತ್ತಿದೆಯೋ ಅಥವಾ ಇಲ್ಲವೋ ಎಂಬುದನ್ನು ಜನರ ಮುಂದಿಡುವಂತಹ ಒಂದು ಜವಾಬ್ದಾರಿಯಾಗಿದೆ. ಆ ಜವಾಬ್ದಾರಿಯನ್ನು ಈ ಸರಕಾರ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ನಲ್ಲಿ ಇಂದು ಆಯೋಜಿಸಿದ್ದ 'ದೃಢ ಕರ್ನಾಟಕದ ಸಂಕಲ್ಪ – 100 ದಿನಗಳ ಯಶಸ್ವಿ ಪೂರೈಕೆ' ಕಾರ್ಯಕ್ರಮ ಉದ್ಘಾಟಿಸಿ ಬಳಿಕ ಮಾತನಾಡಿದ ಅವರು, ನಾವು ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿದ್ದೇವೆ. ಜನರು ಇಲ್ಲಿ ಮಾಲಕರು, ನಾವು ಜನರಿಗೆ ಏನು ವಾಗ್ದಾನಗಳನ್ನು ಕೊಟ್ಟಿದ್ದೇವೆ, ಆ ವಾಗ್ದಾನಗಳನ್ನು ಜಾರಿ ಮಾಡುತ್ತಿದ್ದೇವೆಯೋ? ಇಲ್ಲವೋ? ಎನ್ನುವುದು ಅದು ಬಹಳ ಮುಖ್ಯ. ಸಮಾಜದ ಅಸಮಾನತೆಯನ್ನು ಹೋಗಲಾಡಿಸಬೇಕು. ಸಮ ಸಮಾಜವನ್ನು ನಿರ್ಮಾಣ ಮಾಡಬೇಕು. ನಾವು ಸಮ ಸಮಾಜ ನಿರ್ಮಾಣ ಮಾಡದೆ ಹೋದರೆ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ನಡೆಯುತ್ತಿದ್ದೇವೆ ಎಂಬ ಭಾವನೆಯನ್ನು ವ್ಯಕ್ತವಾಗುತ್ತದೆ ಎಂದರು.

ಸಮಾಜದಲ್ಲಿ ಇರುವ ಅಸಮಾನತೆ, ಬಡತನ, ನಿರುದ್ಯೋಗ, ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಉತ್ಪಾದನೆಯನ್ನು ಹೆಚ್ಚು ಮಾಡು ವಂತಹ ಪ್ರಯತ್ನವನ್ನು ಮಾಡಬೇ ಕು. ನಾವು ಅಧಿಕಾರಕ್ಕೆ ಬಂದು ಸೆ.14ಕ್ಕೆ 3 ವರ್ಷ 4 ತಿಂಗಳು ಪೂರೈಸುತ್ತದೆ. ಡಿ.ಕೆ ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ ಇಂದಿಗೆ 100 ದಿನಗಳು ಆಗುತ್ತದೆ. 100 ದಿನದಲ್ಲಿ ಏನು ಮಾಡಿದ್ದೇನೆ ಎಂಬ ಕೈಪಿಡಿ ಇಂದು ಬಿಡುಗಡೆಯಾಗಿದೆ.

ಯುದ್ಧ ಆರಂಭವಾಗಿದೆ, ರಣರಂಗದಲ್ಲಿ ಗೆಲುವು ನಮ್ಮದೇ: ಬಿ.ವೈ. ವಿಜಯೇಂದ್ರ



ಬಳ್ಳಾರಿ: ರಾಜ್ಯ ಕಾಂಗ್ರೆಸ್ ಸರ್ಕಾರ ಆದಷ್ಟು ಬೇಗ ಮನೆಗೆ ಹೋಗಲಿದೆ. ಅದನ್ನು ಜನರೇ ತೀರ್ಮಾನಿಸಿದ್ದಾರೆ. ಆಡಳಿತ ಪಕ್ಷದ ಶಾಸಕರೇ ಸರ್ಕಾರದ ವಿರುದ್ಧ ಮಾತನಾಡುತ್ತಿದ್ದಾರೆ. ಭ್ರಷ್ಟ, ಜನವಿರೋಧಿ ಸರ್ಕಾರದ ವಿರುದ್ಧ ನಮ್ಮ ಯುದ್ಧ ಆರಂಭವಾಗಿದೆ. ರಣರಂಗದಲ್ಲಿ ಬಿಜೆಪಿ ಒಂದು ಅಪೂರ್ವವಾದ ಜಯ ಸಾಧಿಸಲಿದೆ. ನಮ್ಮ ಗೆಲುವು ತಡೆಯಲು ಡಿಕೆ, ಬಿಕೆ ಯಾರಿಂದಲೂ ಸಾಧ್ಯವಿಲ್ಲ. ಬಿಜೆಪಿಗೆ ಜನಾಶ್ರೀರ್ವಾದ ಸಿಗಲಿದೆ ಎಂದರು.

ನಗರದ ಶ್ರೀ ಕನಕದುರ್ಗ ದೇವಿಗೆ ಪೂಜೆ ಸಲ್ಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ಹತ್ತು ದಿನಗಳ ಕಾಲದಿಂದ ಹಮ್ಮಿಕೊಂಡಿದ್ದ ಐತಿಹಾಸಿಕ ಬಳ್ಳಾರಿ ಚಲೋ ಪಾದಯಾತ್ರೆ ಇಂದು ಮುಕ್ತಾಯವಾಗುತ್ತಿದೆ. ಪಾದಯಾತ್ರೆ ಮಾತ್ರವೇ ಮುಕ್ತಾಯವಾಗಿದ್ದು ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮತ್ತೆ ಆರಂಭವಾಗಲಿದೆ.

ಪುಟ 3

ಕರ್ನಾಟಕ ಮಾಹಿತಿ ಆಯೋಗದ ಮಹತ್ವದ ತೀರ್ಪು: ಸಿಸಿಟಿವಿ ದೃಶ್ಯಾವಳಿ ನೀಡಿದ ಪಿ.ಎಸ್.ಐಗಳ ವಿರುದ್ಧ ಕ್ರಮಕ್ಕೆ ಶಿಫಾರಸ್ಸು

ರಾಯಚೂರು, ಸೆ.10– ಪೊಲೀಸ್ ಠಾಣೆಗಳಲ್ಲಿ ಸಿಸಿ ಟಿ.ವಿ. ದೃಶ್ಯಾವಳಿ ಸಕಾಲಕ್ಕೆ ನೀಡಲು ನಿರ್ಲಕ್ಷ ವಹಿಸಿದ ಹಾಗೂ ಸುಪ್ರೀಮ್ ಕೋರ್ಟ ತೀರ್ಪಿನಂತೆ ಠಾಣೆಯ ಸಿ.ಸಿ.ಟಿ.ವಿ. ದೃಶ್ಯಾವಳಿ ಸಂಗ್ರಹ ಮಾಡದ ಕಾರಣ ಸಿರವಾರ ಪೊಲೀಸ್ ಠಾಣೆಯ ಮೂರು ಪಿ.ಎಸ್.ಐ. ಗಳು ದಂಡ ವಿಧಿಸಿ ಆಯೋಗ ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡಿದೆ.

ರಾಯಚೂರು ಜಿಲ್ಲೆಯ ಸಿರವಾರ ಪೊಲೀಸ್ ಠಾಣೆಗೆ ಪವನ ಕುಮಾರ ಎನ್ನುವರು ದಿನಾಂಕ: 04–06–2022 ರಂದು ಮಾಹಿತಿ ಹಕ್ಕು ಅಧಿನಿಯಮ 2005ರ 6(1) 7(1) 7(2) ರಡಿ ಅರ್ಜಿ ಸಲ್ಲಿಸಿ ದಿನಾಂಕ: 01–06–2022 ರ ರಾತ್ರಿ 7:45 ರಿಂದ ರಾತ್ರಿ 11:50 ರ ವರೆಗಿನ ಸಿ.ಸಿ. ಟಿ.ವಿ.ದೃಶ್ಯಾವಳಿ ನೀಡುವಂತೆ ಕೋರಿದ್ದರು.

ಮೇಲ್ಮನವಿದಾರರು ಕೋರಿದ ಮಾಹಿತಿ, ಮಾಹಿತಿ ಹಕ್ಕು ಅಧಿನಿಯಮ 2005ರ 6(1) 7(1) 7(2) ರ ಪ್ರಕಾರ ಜೀವ ಮತ್ತು ಸ್ವತಂತ್ರಕ್ಕೆ ಸಂಬಂಧಿಸಿದ್ದು ಅದನ್ನು 48 ಗಂಟೆಯೊಳಗೆ ಒದಗಿಸಬೇಕಿತ್ತು. ಆದರೆ ಮೇಲ್ಮನವಿದಾರ ಅರ್ಜಿ ಸಲ್ಲಿಸಿದ ಎರಡು ತಿಂಗಳ ಬಳಿಕ ಅಂದರೆ 13–08–2022 ಆಗಿನ ಪಿ.ಎಸ್.ಐ. ಗೀತಾಂಜಲಿ ಸಿಂದೆ. ತಾವು ಕೋರಿದ ಮಾಹಿತಿ ಮಾಹಿತಿ ಹಕ್ಕು ಅಧಿನಿಯಮ 8(1) ಜೆ.ಗೆ ಸಂಬಂಧಿಸಿದೆ ಎಂದು ಹಿಂಬರಹ ನೀಡಿದ್ದರು.

ತಾವು ಕೋರಿದ ಸಕಾಲಕ್ಕೆ ನೀಡದ ಕಾರಣ ಮೇಲ್ಮನವಿದಾರರು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಸಲ್ಲಿಸಿದ ದ್ವಿತೀಯ ಮೇಲ್ಮನವಿಯ ವಿಚಾರಣೆ ನಡೆಸಿ ಮೇಲ್ಮನವಿದಾರರು ಕೋರಿದ ಸಿ.ಸಿ. ಟಿ.ವಿ. ದೃಶ್ಯಾವಳಿ ಒದಗಿಸುವಂತೆ ಆದೇಶ ನೀಡಿತ್ತು. ಆದರೆ ಆಯೋಗದ ಆದೇಶ ಪಾಲಿಸದ ಕಾರಣ

ಪುಟ 3

ಹದ್ದಿನಾಳ ಗ್ರಾಮಕ್ಕೆ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರ ಭೇಟಿ

ಮೃತ ಭೂಮಾನಂದ ಕುಟುಂಬಕ್ಕೆ ಸರಕಾರದಿಂದ ಎಲ್ಲಾ ರೀತಿಯ ನೆರವು ಒದಗಿಸಲು ಕ್ರಮ : ಮಂಜುನಾಥ



ರಾಯಚೂರು, ಸೆ.10– ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಹದ್ದಿನಾಳ ಅವರನ್ನು ಇತ್ತೀಚೆಗೆ ಸುಂಕೇಶ್ವರಹಾಳ ಗ್ರಾಮದ ಬಳಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಲೆ ಮಾಡಿದ ಹಿನ್ನೆಲೆಯಲ್ಲಿ ಸೆಪ್ಟೆಂಬರ್ 10ರ ಗುರುವಾರ ಅಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ ಅವರು ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿದರು.

ಪುಟ 3

ಅತ್ಯಾಚಾರ ಹಾಗೂ ಕೊಲೆ ಪ್ರಕರಣದ ಆರೋಪಿಗಳ ಬಂಧನ

ರಾಯಚೂರು, ಸೆ.10– ಜಿಲ್ಲೆಯ ಸಿರವಾರ ತಾಲೂಕಿನ ಹೋಕ್ರಾಣಿ ಗ್ರಾಮದಲ್ಲಿ ದಿನಾಂಕ 19.08.2026ರ ಸಾಯಂಕಾಲ ಸುಮಾರು 07ಗಂಟೆಗೆ ಕುಮಾರಿ ಆಶ್ವಿನಿ (21) ಇವರು ಹೊಕ್ರಾಣಿ ಗ್ರಾಮದಲ್ಲಿ ಬಹಿರ್ದೇಸೆಗೆ ಹೋದಾಗ, ಅಶ್ವಿನಿಯನ್ನು ಯಾರೋ ಅಪಹರಣ ಮಾಡಿ, ಅತ್ಯಾಚಾರ ಎಸಗಿ ಹಾಗೂ ಕೊಲೆ ಮಾಡಿ ಹಾಗೂ ಹೆಣವನ್ನು ಹೊಕ್ರಾಣಿಯ ದೊಡ್ಡಾಳ ಬಾವಿಯಲ್ಲಿ ಹಾಕಿರುವುದಾಗಿ ಅಶ್ವಿನಿರವರ ತಂದೆ ತಿಮ್ಮಾರೆಡ್ಡಿರವರು ಸಿರವಾರ ಪೊಲೀಸ್ ಠಾಣೆಗೆ ನೀಡಿದ ದೂರಿನ ಮೇರೆಗೆ ಸಿರವಾರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ 158/2026 ಕಲಂ: 137(2). 103(1), 70, 238 ಸಹಿತ 3(5) ಐಓಖ–2023 ಮತ್ತು ಕಲಂ 3(2)(ತ) SC/ST Prevention of Atrocities Act-1989, Amendment Act-2015ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

ಪುಟ 3

ರಾಯಚೂರಿಗೆ ಏಮ್ಸ್ ಮಂಜೂರು ಮಾಡಿಸುವಲ್ಲಿ ಕೇಂದ್ರ ಸರ್ಕಾರದ ಮೇಲೆ ಒತ್ತಡ : ಮಹಿಮಾ ಪಟೇಲ್

ರಾಯಚೂರು, ಸೆ.10– ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಇಂದಿಗೆ 1582ನೇ ದಿನಕ್ಕೆ ಮುಂದುವರೆದಿದೆ. ಜನತಾದಳ (ಯು)ರಾಜ್ಯ ಅಧ್ಯಕ್ಷರಾದ ಮಹಿಮಾ ಪಟೇಲ್ ಅವರು ಏಮ್ಸ್ ಹೋರಾಟ ವೇದಿಕೆಗೆ ಆಗಮಿಸಿ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.

ನಗರದಲ್ಲಿ ಮಾತನಾಡಿದ ಅವರು" ಹಿಂದುಳಿದ, ರೋಗಪೀಡಿತ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ಒತ್ತಾಯಿಸಿ ಸುಧೀರ್ಘವಾಗಿ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ನಡೆಯುತ್ತಿದೆ, ಸತ್ಯಾಗ್ರಹದ ಫಲವಾಗಿ ಈಗಾಗಲೇ ಕರ್ನಾಟಕ ರಾಜ್ಯ ಸರ್ಕಾರ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ಕೇಂದ್ರ ಸರ್ಕಾರವನ್ನು ವಿನಂತಿಸಿ ಶಿಫಾರಸ್ಸು ಮಾಡಿದೆ,

ಪುಟ 3



ತೀವ್ರ ಕುತೂಹಲ ಮೂಡಿಸಿದ್ದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ತೆರೆ

ಹಿಂದುಳಿದ ವರ್ಗಗಳ ಸಮುದಾಯದ ಹಿರಿಯ ನಾಯಕ ಕೆ.ಶಾಂತಪ್ಪ ಆಯ್ಕೆ

ರಾಯಚೂರು, ಸೆ.10– ತೀವ್ರ ಜಿದ್ದಾಜಿದ್ದಿನಿಂದ ಕೂಡಿದ್ದ ರಾಯಚೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಕೊನೆಗೆ ಹಿಂದುಳಿದ ವರ್ಗಗಳ ಸಮುದಾಯದ ಹಿರಿಯ ನಾಯಕ ಕೆ. ಶಾಂತಪ್ಪ ಅವರನ್ನು ಆಯ್ಕೆ ಮಾಡಲಾಗಿದೆ.

ಕಳೆದ ನಾಲ್ಕು ದಶಕದಿಂದ ಕಾಂಗ್ರೆಸ್ ಪಕ್ಷದಲ್ಲಿಯೇ ದುಡಿಯುತ್ತಿದ್ದ ಹಿಂದುಳಿದ ವರ್ಗದ ಗಂಗಾಮತಸ್ಥ ಸಮಾಜದ ಹಿರಿಯ ಮುಖಂಡ ಕೆ.ಶಾಂತಪ್ಪ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಕೊನೆಗೆ ಅಧ್ಯಕ್ಷರಾಗಿ ನೇಮಿಸಿ ಗೌರವ ಸಲ್ಲಿಸಿದೆ ಎಂದು ಹೇಳಲಾಗುತ್ತಿದೆ.



ಕೆ.ಶಾಂತಪ್ಪ ಅವರು ನಗರದ ತಿಮ್ಮಾಪುರಂಪೇಟೆಯಲ್ಲೇ ಗುರುತಿಸಿಕೊಂಡಿದ್ದು 3 ಬಾರಿ ನಗರಸಭೆ ಸದಸ್ಯರಾಗಿ, ಒಮ್ಮೆ ಎಪಿಎಂಸಿ ಅಧ್ಯಕ್ಷರಾಗಿ,ದತ್ತಾತ್ರೇಯ ದೇವಸ್ಥಾನ ಸಮಿತಿಯ ಅಧ್ಯಕ್ಷರಾಗಿ ಹಾಗೂ ಅನೇಕ ಜವಾಬ್ದಾರಿ ನಿರ್ವಹಿಸಿದ್ದು, ಹಿರಿಯರಾದರೂ ಇವರಿಗೆ ಎರೆಡು ಬಾರಿ ಅಧ್ಯಕ್ಷ ಸ್ಥಾನ ಕೈತಪ್ಪಿತ್ತು, ನೀರಾಶರಾಗದೇ ಪಕ್ಷ ನೀಡಿದ ಕಾರ್ಯವನ್ನು ಮಾಡುತ್ತಾ ನಗರದ ಎಲ್ಲಾ ಸಮುದಾಯದೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ.

ಪತ್ರಕರ್ತರ 41ನೇ ರಾಜ್ಯ ಸಮ್ಮೇಳನಕ್ಕೆ ಸಿದ್ಧತೆ

ಡಿಸಿ ಜತೆ ಕೆರಕಾ ಸಂಘದ ಪದಾಧಿಕಾರಿಗಳ ಚರ್ಚೆ: ಜಿಲ್ಲಾಡಳಿತದಿಂದ ಅಗತ್ಯ ಸಹಕಾರ: ಪೂವಿತಾ ಎಸ್.



ರಾಯಚೂರು, ಸೆ.10– ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಯಚೂರಿನಲ್ಲಿ ನಡೆಯಲಿರುವ 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದ ಸಿದ್ಧತೆ ಕುರಿತು ಸಂಘದ ಪದಾಧಿಕಾರಿಗಳು ಗುರುವಾರ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರನ್ನು ಭೇಟಿಯಾಗಿ ಚರ್ಚಿಸಿದರು.

ನಗರದ ನೂತನ ಜಿಲ್ಲಾಡಳಿತ ಭವನದಲ್ಲಿ ನಡೆದ ಸಭೆಯಲ್ಲಿ ಸಮ್ಮೇಳನದ ರೂಪುರೇಷೆ, ಪತ್ರಕರ್ತರ ವಸತಿ, ಊಟ, ಸಾರಿಗೆ ಸೇರಿದಂತೆ ವಿವಿಧ ವ್ಯವಸ್ಥೆಗಳ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಲಾಯಿತು.

ಜಿಲ್ಲಾಧ್ಯಕ್ಷ ಆರ್. ಗುರುನಾಥ್ ಮಾತನಾಡಿ, ರಾಯಚೂರಿನಲ್ಲಿ ನಡೆಯಲಿರುವ ಎರಡು ದಿನಗಳ ರಾಜ್ಯ ಸಮ್ಮೇಳನಕ್ಕೆ ರಾಜ್ಯದ ವಿವಿಧ ಜಿಲ್ಲೆಗಳಿಂದ 5 ಸಾವಿರಕ್ಕೂ ಅಧಿಕ ಪತ್ರಕರ್ತರು ಆಗಮಿಸುವ ನಿರೀಕ್ಷೆಯಿದೆ. ಸಮ್ಮೇಳನಕ್ಕೆ ಆಗಮಿಸುವ ಪತ್ರಕರ್ತರಿಗೆ ಅಗತ್ಯ ವಸತಿ, ಊಟ, ಸಾರಿಗೆ ಹಾಗೂ ಇತರ ಮೂಲಸೌಲಭ್ಯಗಳನ್ನು ಕಲ್ಪಿಸಲು ಜಿಲ್ಲಾಡಳಿತದ ಸಹಕಾರ ಅತ್ಯಗತ್ಯ ಎಂದು ತಿಳಿಸಿದರು.

ರಾಜ್ಯ ಸಮಿತಿ ಸದಸ್ಯ ಬಸವರಾಜ್ ನಾಗಡದಿನ್ನಿ ಮಾತನಾಡಿ,

ಪುಟ 3

ಜಿಲ್ಲೆಯಲ್ಲಿ ಕೊಲೆ ಪ್ರಕರಣ ದೌರ್ಜನ್ಯ ತಡೆಗೆ ಕಠಿಣ ಕಾನೂನು ಜಾರಿಗೆ ಒತ್ತಾಯ

ರಾಯಚೂರು, ಸೆ.10– ಜಿಲ್ಲೆಯಲ್ಲಿ ನಡೆದ ಸರಣಿ ದಲಿತರ ಅತ್ಯಾಚಾರ ಕೊಲೆ ಘಟನೆಗಳನ್ನು ಸಿ.ಐ.ಡಿ ತನಿಖೆಗೆ ಒಪ್ಪಿಸಿ ನಿಷ್ಪಪಾತವಾಗಿ ತನಿಖೆ ನಡೆಸಿ ಆರೋಪಿಗಳನ್ನು ಕಠಿಣ ಶಿಕ್ಷೆಗೆ ಒಳಪಡಿಸಲು ಮತ್ತು ಜಿಲ್ಲೆಯಲ್ಲಿ ದಲಿತರ ಮೇಲೆ ನಡೆಯುವ ದೌರ್ಜನ್ಯಗಳ ತಡೆಗೆ ಸೂಕ್ತ ಕಾನೂನುಗಳು ಜಾರಿಗೊಳಿಸಬೇಕು ಎಂದು ಸಿ.ಪಿ.ಐ.ಎಮ್ ಇಂದು ಪ್ರತಿಭಟನೆ ನಡೆಸಲಾಯಿತು.

ನಗರದ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿ, ರಾಜ್ಯ ಸರಕಾರಕ್ಕೆ ಒತ್ತಾಯಿಸಿದರು.ಹೊಕ್ರಾಣಿ ಗ್ರಾಮದ ಅಶ್ವಿನಿ, ಕರಡಕಲ್ ಗ್ರಾಮದ ರಾಣೇಮ್ಮ ಮಹಿಳೆಯ ಮೇಲೆ ನಡೆದ ಅತ್ಯಾಚಾರ ಕೊಲೆ ಘಟನೆಗಳು ಮತ್ತು ಹದ್ದಿನಾಳ ಗ್ರಾಮದ ಭೂಮನಂದ ಕೊಲೆ ಘಟನೆಯನ್ನು ಸಿ.ಐ.ಡಿ ತನಿಖೆಗೆ ಒಪ್ಪಿಸಿ ಆರೋಪಿಗಳನ್ನು ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಸಂತ್ರಸ್ಥರ ಕುಟುಂಬಕ್ಕೆ ತಲಾ ಒಂದು ಕೋಟಿ ರೂಪಾಯಿಗಳ ಪರಿಹಾರ ನೀಡಬೇಕು ಜೊತೆಗೆ ಕುಟುಂಬ ಸದಸ್ಯರ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಜಿಲ್ಲಾಡಳಿತ ಭರವಸೆ ಕೂಡಲೇ ಜಾರಿಗೊಳಿಸಬೇಕು. ಹಾಗೂ ಪ್ರತಿ ಕುಟುಂಬಕ್ಕೆ 5 ಎಕರೆ ಜಮೀನು ಭೂ ಮಂಜೂರು ಮಾಡಬೇಕು.ಪ್ರತಿ ತಿಂಗಳು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳ ನಡೆಯುವ ದಲಿತರ ಕುಂದುಕೊರತೆಗಳ ಸಭೆಗಳನ್ನು ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆಸಲು ಕ್ರಮವಹಿಸಬೇಕು.ನಗರ ಮತ್ತು ಗ್ರಾಮೀಣಾ ಪ್ರದೇಶಗಳಲ್ಲಿ ಆಕ್ರಮವಾಗಿ ಕಾನೂನು ಬಾಹಿರವಾಗಿ ಮಾರಾಟ ಮಾಡುವ ಮದ್ಯ ಪಾನ ಮಾಡಿ ಅಂತವರ ಮೇಲೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು.ಇಡೀ ಜಿಲ್ಲೆಯನ್ನು ಬಯಲು ಶೌಚಾಲಯ ಮುಕ್ತ ಜಿಲ್ಲೆಯಾಗಿ ಮಾಡಲು ಅಗತ್ಯ ಯೋಜನೆ ರೂಪಿಸಿ ಶೀಘ್ರದಲ್ಲಿ ಜಾರಿಗೊಳಿಸಬೇಕು.

ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಬಲಪಡಿಸಲು ಅಗತ್ಯವಿರುವ ಪೊಲೀಸ್ ಸಿಬ್ಬಂದಿಯನ್ನು ನೇಮಕ ಮಾಡಿ ಅಗತ್ಯ ಮೂಲಕ ಸೌಕರ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕೆ.ಜಿ ವೀರೇಶ, ಹೆಚ್ ಪದ್ಮಾ ಸೇರಿದಂತೆ ಉಪಸ್ಥಿತರಿದ್ದರು.

ಬಿವಿವಿ ಸಂಘದ ಹಾನಗಲ್ ಶ್ರೀ ಕುಮಾರೇಶ್ವರ ಕಾಲೇಜ್ ಆಫ್ ಫಾರ್ಮಸಿಯ ಪದವಿ ಪ್ರದಾನ ಸಮಾರಂಭ

ಸಂಶೋಧನೆಯ ಮೂಲಕ ಸಮಾಜಕ್ಕೆ ಕೊಡುಗೆ ನೀಡಿ

ಬಾಗಲಕೋಟೆ,ಸೆ.10-

ವಿದ್ಯಾರ್ಥಿಗಳು ಸ್ಥಳೀಯವಾಗಿ ಲಭ್ಯವಿರುವ ಉತ್ತಮ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸಂಶೋಧನಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸುವುದರ ಜೊತೆಗೆ ಸಮಾಜಕ್ಕೆ ಮಹತ್ವದ ಕೊಡುಗೆ ನೀಡಬೇಕು ಎಂದು ಬೆಂಗಳೂರಿನ ಲಿವಿ ಯಾನ್ ಬಯೋಲ್ಯಾಬ್ಸ್ ಪ್ರೈವೇಟ್ ಲಿಮಿ ಟೆಡ್‌ನ ಸಂಸ್ಥಾಪಕ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಾ. ಶಿವಶಂಕರ ಎನ್.ಜಿ. ಹೇಳಿದರು. ನಗರದ ಬಿವಿವಿ ಸಂಘದ ನೂತನ ಸಭಾಭವನದಲ್ಲಿ ಬುಧವಾರ ಬಿವಿವಿ ಸಂಘದ ಹಾನಗಲ್ ಶ್ರೀ ಕುಮಾರೇಶ್ವರ ಕಾಲೇಜ್ ಆಫ್ ಫಾರ್ಮಸಿ ವತಿಯಿಂದ ಆಯೋಜಿಸಿದ್ದ ಬಿ.ಫಾರ್ಮ್, ಎಂ.ಫಾರ್ಮ್ ಹಾಗೂ ಫಾರ್ಮ್-ಡಿ ಪದವಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪದವಿ ಪ್ರದಾನ ಮಾಡಿ ಅವರು ಮಾತನಾಡಿದವರು, ಉದ್ಯೋಗಿಯಾಗಿರಲಿ ಅಥವಾ ಉದ್ಯೋಗದಾತರಾಗಿರಲಿ, ಪ್ರತಿಯೊಬ್ಬರಿಗೂ ಸಾಧನೆ ಮಾಡಲು ಸಮಾನ ಅವಕಾಶಗಳಿವೆ. ಕೌಶಲ್ಯ, ಶಿಸ್ತು, ಸಮಯಪಾಲನೆ, ನಿರಂತರ ಅಭ್ಯಾಸ ಹಾಗೂ ಪರಿಶ್ರಮ ಯಶಸ್ಸಿನ ಪ್ರಮುಖ ಅಂಶಗಳಾಗಿವೆ. ಹಣವೊಂದೇ ಜೀವನದ ಮುಖ್ಯ ಗುರಿಯಾಗಬಾರದು. ಜ್ಞಾನ, ತಾಳ್ಮೆ, ತಂಡದ ಕಾರ್ಯಕ್ಷಮತೆ ಹಾಗೂ ಸಮಾಜ ಸೇವೆಯ ಮನೋಭಾವವೂ ವ್ಯಕ್ತಿಯ ಬೆಳವಣಿಗೆಗೆ ಅಗತ್ಯ. ಫಾರ್ಮಸಿ ಎಂದರೆ ಕೇವಲ ಮಾತ್ರೆ ತಯಾರಿಸುವುದಲ್ಲ;



ಆರೋಗ್ಯವಂತ ಸಮಾಜ ಮತ್ತು ದೇಶ ನಿರ್ಮಾಣದಲ್ಲಿ ಫಾರ್ಮಸಿಸ್ಟ್‌ಗಳ ಜವಾಬ್ದಾರಿ ಮಹತ್ವದ್ದಾಗಿದೆ ಎಂದರು.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ನಿರ್ದೇಶಕ ಡಾ. ಎಸ್.ಎಂ. ಶಿವಪ್ರಸಾದ್ ಮಾತನಾಡಿ, ಎಐ ಬರಬಹುದು, ರೋಬೋಟ್‌ಗಳು ಬರಬಹುದು; ಆದರೆ ರೋಗಿಗೆ ಧೈರ್ಯ ತುಂಬುವ ಮಾನವೀಯ ಸ್ಪರ್ಶವನ್ನು ಯಾವುದೂ ಬದಲಿಸಲಾರದು. ಕರ್ನಾಟಕ ನಿಮ್ಮನ್ನು ನಂಬಿದೆ, ಭಾರತ ನಿಮ್ಮನ್ನು ಎದುರು ನೋಡುತ್ತಿದೆ. ವಿಶ್ವ ಫಾರ್ಮಸಿ ಕ್ಷೇತ್ರದ ನಾಯಕರಾಗಿ ಬೆಳೆಯಿರಿ ಎಂದು ಪದವೀಧರರಿಗೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಾನಗಲ್ ಶ್ರೀ ಕುಮಾರೇಶ್ವರ ಕಾಲೇಜ್ ಆಫ್ ಫಾರ್ಮಸಿಯ ಆಡಳಿತ ಮಂಡಳಿ ಅಧ್ಯಕ್ಷ ಮಲ್ಲಿಕಾರ್ಜುನ ಎಸ್. ಸಾಸನೂರ ಮಾತನಾಡಿ, ಇಂದು ನಿಮ್ಮ ಜೀವನದ ಅತ್ಯಂತ ಮಹತ್ವದ ದಿನ. ನೀವು ಕೇವಲ ಪದವಿಯನ್ನು ಪಡೆಯುತ್ತಿಲ್ಲ; ಸಮಾಜದ ಆರೋಗ್ಯದ ಜವಾಬ್ದಾರಿಯನ್ನೂ ಹೊರುತ್ತಿದ್ದೀರಿ. ಬಿವಿವಿ ಸಂಘವು ಕಳೆದ 100 ವರ್ಷಗಳಿಂದ ಶಿಕ್ಷಣದ ಮೂಲಕ ಸಮಾಜ ಸೇವೆ ಮಾಡುತ್ತಿದೆ ಎಂದ ಅವರು, ನಮ್ಮ ಫಾರ್ಮಸಿ ಕಾಲೇಜು ರಾಜ್ಯದ ಅತ್ಯುತ್ತಮ ಕಾಲೇಜುಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ. ಈ ವರ್ಷ ರಾಜೀವ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ 153 ರ್‍ಯಾಂಕ್‌ಗಳು, 15ಕ್ಕೂ ಹೆಚ್ಚು ಪೇಟೆಂಟ್‌ಗಳು ಹಾಗೂ ?82 ಲಕ್ಷ ಸಂಶೋಧನಾ ಅನುದಾನ ದೊರೆತಿರುವುದು ಇದಕ್ಕೆ ಸಾಕ್ಷಿಯಾಗಿದೆ. ಅಲ್ಲದೆ ವಿದ್ಯಾರ್ಥಿನಿ ಸೌಮ್ಯ ಜಮಕಂಡಿ 2025-26ನೇ ಸಾಲಿನಲ್ಲಿ ಎಂ.ಪಾರ್ಮ ಫಾರ್ಮಾಸ್ಯುಟಿಕ್ಸ್ ವಿಭಾಗದಲ್ಲಿ ಚಿನ್ನದ ಪದಕ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾಳೆ, ಹೊಸ ಹೊಸ ಸಂಶೋಧನೆಗಳನ್ನು ಕೈಗೊಂಡು ಬಾಗಲಕೋಟೆಯಂತಹ ಪ್ರದೇಶದಿಂದಲೂ ಜಾಗತಿಕ ಮಟ್ಟದ ಸಂಶೋಧನೆ ನಡೆಸಬಹುದು ಎಂಬುದನ್ನು ತೋರಿಸಿಕೊಡಬೇಕು. ಬಿವಿವಿ ಸಂಘ ಹಾಗೂ ಕ್ರಿಯಾಶೀಲ,ಕಾಯಕಯೋಗಿ ಕಾರ್ಯಾಧ್ಯಕ್ಷ ಡಾ. ವೀರಣ್ಣ ಚರಂತಿಮಠ ಅವರು ಸದಾ ನಿಮ್ಮ ಬೆಂಬಲಕ್ಕೆ ನಿಲ್ಲಲಿದ್ದಾರೆ ಎಂದರು. ಪ್ರಾಚಾರ್ಯ ಡಾ. ವೈ. ಶ್ರೀನಿವಾಸ್ ಸ್ವಾಗತಿಸಿದರು. ಡಾ. ಜಯದೇವ ಹಿರೇಮಠ ಹಾಗೂ ಡಾ. ವಿ.ಎಂ. ಚಂದ್ರಶೇಖರ ಕಾಲೇಜಿನ ವಾರ್ಷಿಕ ಚಟುವಟಿಕೆಗಳ ವರದಿ ವಾಚಿಸಿದರು. ಡಾ. ಅನಿತಾ ದೇಸಾಯಿ ಹಾಗೂ ಡಾ. ವಿ.ಎಂ. ಕಿತ್ತೂರ ಅತಿಥಿಗಳನ್ನು ಪರಿಚಯಿಸಿದರು. ಡಾ. ಶರಣಬಸವ ಬಿರಾದಾರ ಪ್ರಮಾಣ ವಚನ ಬೋಧಿಸಿದರು. ಡಾ. ಪೂರ್ಣಿಮಾ ಹೊಸಮಠ ವಂದಿಸಿದರು.

ಪ್ರಸಾದ ಮಳಗಿ, ಸುಶ್ಮಿತಾ ಮೂಡಲಗಿ, ಸಂಜಯ ಹಾವರಗಿ ಹಾಗೂ ಡಾ. ಅಭಿರಾಮಿ ಪಾನೀಕರ ಕಾರ್ಯಕ್ರಮ ನಿರೂಪಿಸಿದರು. ಡಾ. ಲಕ್ಷ್ಮಣ ವಿಜಾಪುರ, ಡಾ. ಸುಷ್ಮಾ ಅವಟಿ, ಡಾ. ಶ್ರೀನಿವಾಸ ದೇಶಪಾಂಡೆ ಹಾಗೂ ಡಾ. ಮಲ್ಲಪ್ಪ ಶಲವಾಡಿ ಪದವೀಧರರಿಗೆ ಪ್ರಮಾಣಪತ್ರ ವಿತರಿಸಿದರು. ಕಾರ್ಯಕ್ರಮದಲ್ಲಿ ಬಿವಿವಿ ಸಂಘದ ಗೌರವಾನ್ವಿತ ಸದಸ್ಯರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.



ಕೆರೆ ತುಂಬುವ ಯೋಜನೆಯಲ್ಲಿ ನಿರ್ಲಕ್ಷ್ಯ ಆರೋಪ; ರೇವೂರ (ಕೆ) ಕೆರೆಗೆ ನೀರು ಹರಿಸದಿದ್ದರೆ ಹೋರಾಟದ ಎಚ್ಚರಿಕೆ

ಅಫಜಲಪುರ,ಸೆ.10-

ತಾಲೂಕಿನ ರೇವೂರ (ಕೆ) ಗ್ರಾಮದ ಕೆರೆಗೆ ಕೆರೆ ತುಂಬುವ ಯೋಜನೆಯಡಿ ನೀರು ಹರಿಸದಿರುವುದನ್ನು ಖಂಡಿಸಿ ಗ್ರಾಮಸ್ಥರು ಹಾಗೂ ರೈತ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೆರೆ ತುಂಬುವ ಯೋಜನೆಯಡಿ ಕೊಗನೂರು ಹಾಗೂ ದೀಕ್ಸಂಗಾ ಕೆರೆಗಳಿಗೆ ನೀರು ಪೂರೈಸಲು ಅಳವಡಿಸಿರುವ ಮುಖ್ಯ ಪೈಪ್‌ಲೈನ್ ರೇವೂರ (ಕೆ) ಗ್ರಾಮದ ಕೆರೆ ಪಕ್ಕದಲ್ಲೇ ಹಾದುಹೋಗಿದ್ದರೂ, ರೇವೂರ ಕೆರೆಗೆ ಮಾತ್ರ ನೀರು ಹರಿಸದೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದರು.

ಕೆರೆಗೆ ನೀರು ಹರಿಯದ ಪರಿಣಾಮ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಜಾನುವಾರುಗಳಿಗೆ ನೀರಿನ ಅಭಾವ ತೀವ್ರಗೊಂಡಿದೆ. ಕೂಡಲೇ ಕೆರೆಗೆ ನೀರು ಹರಿಸಿ ಗ್ರಾಮಸ್ಥರು ಹಾಗೂ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ಶಾಶ್ವತ ನೀರಾವರಿ ಸಮಿತಿ ಅಧ್ಯಕ್ಷ ರಮೇಶ್ ಪಾಟೀಲ್ ಹಾಗೂ ಗ್ರಾಮದ ಮುಖಂಡ ಹಸನಪ್ಪ ಮಾತನಾಡಿ, ಸೆಪ್ಟೆಂಬರ್ 20ರೊಳಗೆ ರೇವೂರ (ಕೆ) ಕೆರೆಗೆ ನೀರು ಹರಿಸಬೇಕು. ಇಲ್ಲವಾದರೆ ಆಳಂದ ತಾಲೂಕಿಗೆ ಒಂದು ಹನಿ ನೀರು ಕೂಡ ಹರಿಯಲು ಬಿಡುವುದಿಲ್ಲ. ಮಲ್ಲಾಬಾದ್‌ನಲ್ಲಿ ರಾಷ್ಟ್ರೀಯ ಹೆದ್ದಾರಿ ತಡೆದು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಎಚ್ಚರಿಕೆ ನೀಡಿದರು.

ಈ ಸಮಸ್ಯೆಯನ್ನು ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ ಹಾಗೂ ಅರುಣಕುಮಾರ್ ಪಾಟೀಲ್ ಅವರ ಗಮನಕ್ಕೂ ತರಲಾಗಿದ್ದರೂ, ಇದುವರೆಗೆ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

ರೈತ ಮುಖಂಡ ಗುರು ಚಾಂದಕವಟೆ ಮಾತನಾಡಿ, ರೇವೂರ (ಕೆ) ಕೆರೆಗೆ ಕೂಡಲೇ ನೀರು ಹರಿಸದಿದ್ದರೆ ಅಫಜಲಪುರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಭೀಮಾಶಂಕರ ಮಳ್ಳಿ, ಪರಮೇಶ್ವರ್ ಪಾಟೀಲ್ ಸೇರಿದಂತೆ ಅನೇಕ ರೈತ ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಸರ್ಕಾರದ ಯೋಜನೆಗಳ ಸದುಪಯೋಗ ಪಡೆದು ಸ್ವಾವಲಂಬಿಗಳಾಗಿ: ಶಾಸಕ ಅಲ್ಲಮಪ್ರಭು ಪಾಟೀಲ್

ಕಲಬುರಗಿ,ಸೆ.10-

ಹಿಂದುಳಿದ ವರ್ಗಗಳ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ವಿವಿಧ ಜನಪರ ಯೋಜನೆಗಳ ಸದುಪಯೋಗ ಪಡೆದುಕೊಂಡು ಸ್ವಂತ ಉದ್ಯೋಗ ಆರಂಭಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಹೇಳಿದರು.

ನಗರದಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ವಿವಿಧ ನಿಗಮಗಳ ವತಿಯಿಂದ 2025-26ನೇ ಸಾಲಿನ ಸ್ವಾವಲಂಬಿ ಸಾರಥಿ ಯೋಜನೆ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಸೌಲಭ್ಯ ವಿತರಣೆ ಹಾಗೂ ಹೊಲಿಗೆ ಯಂತ್ರೋಪಕರಣಗಳನ್ನು ವಿತರಿಸಿ ಅವರು ಮಾತನಾಡಿದರು.

ಸರ್ಕಾರದ ವಿವಿಧ ನಿಗಮಗಳ ಮೂಲಕ ಯುವಕರು, ಮಹಿಳೆಯರು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡಲಾಗುತ್ತಿದೆ. ಸ್ವಾವಲಂಬಿ



ಸಾರಥಿ ಸೇರಿದಂತೆ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳು ಸಮರ್ಪಕವಾಗಿ ಬಳಸಿಕೊಂಡು ತಮ್ಮ ಕುಟುಂಬದ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸರ್ಕಾರದ ನೆರವನ್ನು ಕೇವಲ ಸೌಲಭ್ಯವಾಗಿ ಪರಿಗಣಿಸದೆ, ಅದನ್ನು ಆದಾಯದ ಮೂಲವನ್ನಾಗಿ ಪರಿವರ್ತಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು. ವಿಶೇಷವಾಗಿ ಮಹಿಳೆಯರು ಹೊಲಿಗೆ ಯಂತ್ರೋಪಕರಣಗಳಂತಹ ಸೌಲಭ್ಯಗಳನ್ನು ಬಳಸಿಕೊಂಡು ಸ್ವಯಂ ಉದ್ಯೋಗ ಆರಂಭಿಸಿ ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಆಯ್ಕೆಯಾದ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರೋಪಕರಣಗಳನ್ನು ವಿತರಿಸಿ ಶುಭ ಹಾರೈಸಲಾಯಿತು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆಯ ನಾಮನಿರ್ದೇಶಕಿ ವಾಣಿಶ್ರೀ ಸಗರಕರ್ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ್ ತಾರಫೈಲ್, ಪಾಲಿಕೆ ಸದಸ್ಯ ಶೇಖ್ ಹುಸೇನ್, ಕಲಬುರಗಿ ಎಪಿಎಂಸಿ ಸದಸ್ಯರಾದ ನಾಗೇಶ್ ಡಿ. ಮುಚಖೇಡ, ರವಿ ಪಾಟೀಲ್ ಮೋಳಕುಂದ, ಪಕ್ಷದ ಹಿಂದುಳಿದ ವರ್ಗಗಳ ಘಟಕದ ರಾಜ್ಯ ಕಾರ್ಯದರ್ಶಿ ಲಕ್ಷ್ಮಣ್ ಪೂಜಾರಿ ನಂದಿಕೂರ, ಮೋದಿನ್ ಪಟೇಲ್ ಅಣಬಿ, ನಿಗಮದ ವ್ಯವಸ್ಥಾಪಕ ಜಗದೇವಪ್ಪ ಮುಗಟಾ, ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಬಾಲ ಮತ್ತು ಕಿಶೋರ ಕಾರ್ಮಿಕರ ನಿಷೇಧ ನಿಯಂತ್ರಣ ಕಾಯ್ದೆ ಕುರಿತು ತರಬೇತಿ

ತರಬೇತಿ ಕಾರ್ಯಾಗಾರಕ್ಕೆ ನ್ಯಾ.ಮಹಾಸ್ವಾಮಿಜಿ ಚಾಲನೆ

ಬಾಗಲಕೋಟೆ ,ಸೆ.10-

ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಬಾಲ ಮತ್ತು ಕಿಶೋರ ಕಾರ್ಮಿಕರ ನಿಷೇಧ ಹಾಗೂ ನಿಯಂತ್ರಣ ಕಾಯ್ದೆ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾಸ್ಟರ್ ಆರ್.ಕೆ.ಜಿ.ಎಂ.ಎಂ ಮಹಾಸ್ವಾಮಿಜಿ ಚಾಲನೆ ನೀಡಿದರು.

ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ನ್ಯಾಯಮೂರ್ತಿಗಳು ಬಾಲ ಕಾರ್ಮಿಕ ಪದ್ಧತಿ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಮಕ್ಕಳನ್ನು ದುಡಿಮೆಗೆ ಬಳಸದೆ, ಅವರಿಗೆ ಶಿಕ್ಷಣ ಪಡೆಯಲು ಹಾಗೂ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅಗತ್ಯವಾದ ಅವಕಾಶ ಕಲ್ಪಿಸುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೇವಲ ಸರ್ಕಾರದ ಪ್ರಯತ್ನ ಸಾಕಾಗುವುದಿಲ್ಲ. ಅಧಿಕಾರಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ, ಸಂಘ-ಸಂಸ್ಥೆಗಳು, ಉದ್ಯಮಿಗಳು, ಪೋಷಕರು ಹಾಗೂ ಸಾರ್ವಜನಿಕರು ಒಗ್ಗೂಡಿ ಕಾರ್ಯನಿರ್ವಹಿಸಬೇಕು. ಬಾಲ ಕಾರ್ಮಿಕರು ಕಂಡುಬಂದಲ್ಲಿ ಸಂಬಂಧಿಸಿದ ಇಲಾಖೆಗಳ ಗಮನಕ್ಕೆ ತಂದು, ಮಕ್ಕಳನ್ನು ರಕ್ಷಿಸಿ ಶಿಕ್ಷಣದ ಮುಖ್ಯವಾಹಿನಿಗೆ ತರಲು ಕ್ರಮ ಕೈಗೊಳ್ಳಬೇಕು



ಎಂದು ತಿಳಿಸಿದರು. ಇದರ ಜೊತೆಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಿಂದ ದೊರೆಯಬಹುದಾದ ಉಚಿತ ಸೇವೆಗಳ ಬಗ್ಗೆ ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಮಕ್ಕಳು ಬಾಲ್ಯದಲ್ಲಿ ಟಾಟ, ಪಾಠಗಳಲ್ಲಿ ತೊಡಗಿಕೊಳ್ಳಬೇಕು. ಆ ಬಾಲ್ಯವನ್ನು ಅನುಭವಿಸಲು ಬಿಡೆದೇ ಕೆಲಸಕ್ಕೆ ತೊಡಗಿಸಿಕೊಂಡರೆ ಮಗುವಿನ ಭವಿಷ್ಯ ಹಾಳಾಗುತ್ತದೆ. ಅದಕ್ಕಾಗಿ ಸರಕಾರ ಬಾಲ ಕಾರ್ಮಿಕ ಪದ್ದತಿ ನಿಷೇಧ ಕಾಯ್ದೆ ಜಾರಿಗೆ ತಂದಿದ್ದು, ಬಾಲ ಕಾರ್ಮಿಕ ಕಂಡುಬಂದಲ್ಲಿ ಶಿಕ್ಷೆ ಹಾಗೂ ದಂಡಕ್ಕೆ ಗುರಿಪಡಿಸಲಾಗುತ್ತದೆ. ಕಾಯ್ದೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡುವ ಉದ್ದೇಶದಿಂದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಅಂತರರಾಷ್ಟ್ರೀಯ ಕಾರ್ಮಿಕ ಸಂಸ್ಥೆಯ ರಾಷ್ಟ್ರೀಯ ಯೋಜನಾ ಸಮನ್ವಯಾಧಿಕಾರಿ ರಂಜೀತ ಪ್ರಕಾಶ ಅವರು ತರಬೇತಿ ಕಾರ್ಯಾಗಾರದಲ್ಲಿ ಬಾಲ ಮತ್ತು ಕಿಶೋರ ಕಾರ್ಮಿಕರ ನಿಷಧ ಹಾಗೂ ನಿಯಂತ್ರಣ ಕಾಯ್ದೆ 1986 ತಿದ್ದುಪಡಿ ಕಾಯ್ದೆ 2016ರ ಕುರಿತು ಪ್ರಮುಖ ಅಂಶಗಳು, ಬಾಲ ಕಾರ್ಮಿಕರನ್ನು ಗುರುತಿಸುವುದು, ರಕ್ಷಣೆ ಮತ್ತು ಪುನರ್ವಸತಿ ಕ್ರಮಗಳು, ವಿವಿಧ ಇಲಾಖೆಗಳ ಜವಾಬ್ದಾರಿಗಳು ಹಾಗೂ ಕಾಯ್ದೆಯಡಿ ಕೈಗೊಳ್ಳಬಹುದಾದ ಕಾನೂನು ಕ್ರಮಗಳ ಕುರಿತು ತಜ್ಞರಿಂದ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಗದ್ದಿ, ಕಾರ್ಯದರ್ಶಿ ಪ್ರಶಾಂತ ನಾರಾಯನಕರ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ತಹಶೀಲ್ದಾರ ವಾಸುದೇವ ಸ್ವಾಮಿ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಸ್ಥೆಯ ಯೋಜನಾ ನಿರ್ದೇಶಕ ಸುಧಾಕರ ಬಡಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬೆಳೆ ವಿಮೆ ಪರಿಹಾರಕ್ಕೆ ಆಗ್ರಹ : ಬಾಕಿ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿಗೆ ಮನವಿ

ಕಲಬುರಗಿ,ಸೆ.10-

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಪರಿಹಾರ ಸಿಗದೆ ಸಂಕಷ್ಟದಲ್ಲಿರುವ ರೈತರಿಗೆ 2023-24ರಿಂದ 2025-26ನೇ ಸಾಲಿನವರೆಗೆ ಬಾಕಿ ಇರುವ ಎಲ್ಲಾ ಅರ್ಜಿಗಳನ್ನು ತ್ವರಿತವಾಗಿ ಪರಿಶೀಲಿಸಿ, ಅರ್ಹ ರೈತರಿಗೆ ಬಡ್ಡಿ ಸಮೇತ ಪರಿಹಾರ ಪಾವತಿಸಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಆಳಂದ ಶಾಸಕ ಬಿ.ಆರ್. ಪಾಟೀಲ ಅವರ ನೇತೃತ್ವದಲ್ಲಿ ಗ್ರಾಹಕಪರ ಹೋರಾಟಗಾರ ಹಾಗೂ ನ್ಯಾಯವಾದಿ ವೈಜನಾಥ ಎಸ್. ಝುಳಕಿ ಜಿಲ್ಲೆಯ ನೊಂದ ರೈತರ ಪರವಾಗಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲೆಯ ವಿವಿಧ ತಾಲೂಕುಗಳ ರೈತರು ಹಲವು ವರ್ಷಗಳಿಂದ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ವಿಮಾ ಕಂತುಗಳನ್ನು ನಿಯಮಿತವಾಗಿ ಪಾವತಿಸುತ್ತಿದ್ದರೂ, ಅವೈಜ್ಞಾನಿಕ ಬೆಳೆ ಕಟಾವು, ಬೆಳೆ ನಷ್ಟದ ಸರಿಯಾದ ಮೌಲ್ಯಮಾಪನದ ಕೊರತೆ ಹಾಗೂ ವಿಮಾ ಯೋಜನೆಗೆ ಸಂಬಂಧಿಸಿದ ಮಾಹಿತಿಯ ಅಭಾವದಿಂದ ಪರಿಹಾರದಿಂದ ವಂಚಿತರಾಗಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಬೆಳೆ ನಷ್ಟ ಅನುಭವಿಸಿದ ರೈತರು



ಹಲವು ಬಾರಿ ಕೃಷಿ ಇಲಾಖೆ, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ವಿಮಾ ಕಂಪನಿಗಳನ್ನು ಸಂಪರ್ಕಿಸಿದರೂ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಲ್ಲ. ಇದರಿಂದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಲಾಗಿದೆ.

2023-24ರಿಂದ 2025-26ನೇ ಸಾಲಿನವರೆಗೆ ಬಾಕಿ ಇರುವ ಎಲ್ಲಾ ಬೆಳೆ ವಿಮೆ ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ನೇತೃತ್ವದ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯಲ್ಲಿ ತ್ವರಿತಗತಿಯಲ್ಲಿ ವಿಚಾರಣೆ ನಡೆಸಬೇಕು. ಅರ್ಹ ರೈತರಿಗೆ ಯಾವುದೇ ವಿಳಂಬವಿಲ್ಲದೆ ಬೆಳೆ ವಿಮೆ ಪರಿಹಾರ ಪಾವತಿಸುವಂತೆ ಸಂಬಂಧಪಟ್ಟ ವಿಮಾ ಕಂಪನಿಗಳಿಗೆ ನಿರ್ದೇಶನ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಅನಗತ್ಯ ವಿಳಂಬದಿಂದ ರೈತರಿಗೆ ಉಂಟಾದ ಆರ್ಥಿಕ ನಷ್ಟವನ್ನು ಪರಿಗಣಿಸಿ, ಕಾನೂನುಬದ್ಧ ಬಡ್ಡಿಯೊಂದಿಗೆ ವಿಮೆ ಪರಿಹಾರವನ್ನು ಪಾವತಿಸಲು ವಿಮಾ ಕಂಪನಿಗಳಿಗೆ ಸೂಚನೆ ನೀಡಬೇಕು ಎಂದು ಆಗ್ರಹಿಸಲಾಗಿದೆ.

ರೈತರ ಹಿತಾಸಕ್ತಿಯನ್ನು ಗ'ಮ'ನ'ದ'ಲ್ಲಿ'ಟ್ಟು'ಕೊಂ'ಡ' ಜಿಲ್ಲಾಡಳಿತ, ಕೃಷಿ ಇಲಾಖೆ ಹಾಗೂ ವಿಮಾ ಕಂಪನಿಗಳು ಸ'ಮ'ನ್ವ'ಯ'ದಿಂ'ದ' ಕಾರ್ಯನಿರ್ವಹಿಸಿ, ಹಲವು ವರ್ಷಗಳಿಂದ ಬೆಳೆ ವಿಮೆಗಾಗಿ ಕಾಯುತ್ತಿರುವ ರೈತರಿಗೆ ಶೀಘ್ರವೇ ನ್ಯಾಯ ದೊರಕಿಸಿಕೊಡಬೇಕು ಎಂದು ಶಾಸಕ ಬಿ.ಆರ್. ಪಾಟೀಲ ಹಾಗೂ ನ್ಯಾಯವಾದಿ ವೈಜನಾಥ ಎಸ್. ಝುಳಕಿ ಒತ್ತಾಯಿಸಿದ್ದಾರೆ.

ಮೆರವಣಿಗೆಯಲ್ಲಿ ಡಿಜೆ ಬದಲು ಜಾನಪದಾ ಕಲಾ ತಂಡಗಳಿಗೆ ಆದ್ಯತೆ ಕೊಡಿ

ಶಾಂತಿ, ಸೌಹಾರ್ದತೆಯಿಂದ ಗಣೇಶ ಹಬ್ಬ ಆಚರಿಸಿ : ಡಿಸಿ ಸಂಗಪ್ಪ

ಬಾಗಲಕೋಟೆ,ಸೆ.10-

ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಗಣೇಶ ಮಂಡಳಿಗಳು ಹಾಗೂ ಸಾರ್ವಜನಿಕರು ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗಣೇಶ ಹಬ್ಬ ಆಚರಣೆ ಕುರಿತು ಜರುಗಿದ ಶಾಂತತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹಬ್ಬಗಳು ಸಮಾಜದಲ್ಲಿ ಸೌಹಾರ್ದತೆ, ಭಾತೃತ್ವ ಹಾಗೂ ಭಾರತೀಯ ಸಂಸ್ಕೃತಿಯನ್ನು ಬಿಂಬಿಸುವ ರೀತಿಯಲ್ಲಿ ನಡೆಯಬೇಕು. ಗಣೇಶ ಮೆರವಣಿಗೆಯಲ್ಲಿ ಡಿಜೆ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಗಣೇಶ ಮಂಡಳಿಗಳು ಇದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚಿಸಿದರು. ಗಣೇಶೋತ್ಸವ ನಿಮಿತ್ಯ ಹೊರಡಿಸಲಾದ ಮಾರ್ಗಸೂಚಿಯ ಪಾಲಿಸಲು ತಿಳಿಸಿದರು.

ಮೆರವಣಿಗೆಯಲ್ಲಿ ಡಿಜೆ ಬದಲಿಗೆ ಜನಪದ ಕಲಾ ತಂಡಗಳು ಹಾಗೂ ಭಾರತೀಯ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಸಾಂಪ್ರದಾಯಿಕ ವಾದ್ಯಗಳ ಆಯೋಜನೆಗೆ ಆದ್ಯತೆ ನೀಡುವಂತೆ ಸಲಹೆ ನೀಡಿದರು.



ಪಿಒಪಿ ಗಣೇಶ ಮೂರ್ತಿಗಳನ್ನು ಸಹ ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಪರಿಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಮುಂದಾಗಬೇಕು. ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಗೆ ಅನುಮತಿಗಾಗಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಪಿಡಬ್ಲುಡಿ, ಪೊಲೀಸ್, ಹೆಸ್ಕಾಂ ಹಾಗೂ ನಗರಸಭೆಯಿಂದ ಪಡೆಯಬಹುದಾದ ಅನುಮತಿಯಲ್ಲಿ ಅಡೆತಡೆಯಾಗದಂತೆ ಏಕಗವಾಕ್ಷಿ ಪದ್ದತಿಯ ವ್ಯವಸ್ಥೆ ಮಾಡಲಾಗುವುದೆಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ, ಜಿಲ್ಲೆಯಾದ್ಯಂತ ಒಟ್ಟು 3,393 ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವ ನಿರೀಕ್ಷೆಯಿದೆ. ಗಣೇಶೋತ್ಸವದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗುವುದು ಎಂದರು. ಪೊಲೀಸ್ ಸಿಬ್ಬಂದಿಯೊಂದಿಗೆ ಹೋಮ್‌ಗಾರ್ಡ್ ಸಿಬ್ಬಂದಿಯನ್ನೂ ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ಗಣೇಶ ಮಂಡಳಿಗಳು ಪೊಲೀಸರೊಂದಿಗೆ ಸಹಕರಿಸಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಮನವಿ ಮಾಡಿದರು.

ಗಣೇಶೋತ್ಸವವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಸಮಾಜಮುಖಿ ಕಾರ್ಯಗಳಿಗೂ ಬಳಸಿಕೊಳ್ಳುವ ಉದ್ದೇಶದಿಂದ 70 ಬಡ ಮಕ್ಕಳಿಗೆ ಸೈಕಲ್ ವಿತರಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಹಬ್ಬದ ಸಂಭ್ರಮಕ್ಕೆ ಮತ್ತಷ್ಟು ಅರ್ಥ ನೀಡಲಿವೆ ಎಂದು ಜಿಲ್ಲಾಧಿಕಾರಿ ಹೇಳಿದರು. ತಮ್ಮ ಕಡೆಯಿಂದ ವ್ಯಯಕ್ತಿಕವಾಗಿ ಸೈಕಲ್ ನೀಡುವ ಬಗ್ಗೆ ವಿಚಾರಿಸಿ ತಿಳಿಸಲಾಗುವುದೆಂದು ಜಿಲ್ಲಾಧಿಕಾರಿಗಳು ಹೇಳಿದರು. ವಿವಿಧ ಗಣೇಶ ಉತ್ಸವ ಮಂಡಳಿಯವರು ಈಗಾಗಲೇ ಡಿಜೆ ಸೌಂಡ್ ಸಿಸ್ಟಮ್‌ಗೆ ಬುಕ್ ಮಾಡಲಾಗಿದ್ದು, ಈ ವರ್ಷ ಮಾತ್ರ ಡಿಜೆ ಬಳಸಲು ಅವಕಾಶ ನೀಡಲು ವಿನಂತಿಸಿದರೆ, ಇನ್ನು ಕೆಲವರು ಡಿಸೆ ಬಳಸುವದಿಲ್ಲವೆಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ನಗರ ಸ್ವಚ್ಚತೆ, ವಿದ್ಯುತ್ ವ್ಯವಸ್ಥೆಗೆ ಗಣೇಶ ಮಂಡಳಿಗಳು ಮನವಿ ಮಾಡಿಕೊಂಡರು. ಗಣೇಶೋತ್ಸವದ ಸಂದರ್ಭದಲ್ಲಿ ನಗರದ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮೆರವಣಿಗೆ ಹಾಗೂ ಗಣೇಶ ಪ್ರತಿಷ್ಠಾಪನಾ ಸ್ಥಳಗಳಿಗೆ ಸಮರ್ಪಕ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದರು. ನಗರದಲ್ಲಿ 150ಕ್ಕೂ ಹೆಚ್ಚು ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗುತ್ತಿದ್ದು, ವಿದ್ಯುತ್ ಸಂಪರ್ಕಕ್ಕಾಗಿ ಹೆಸ್ಕಾಂ ವತಿಯಿಂದ ಪ್ರತಿ ಗಣೇಶ ಮಂಡಳಿಯಿಂದ 2,500 ಪಡೆಯಲಾಗುತ್ತಿದೆ. ಆದರೆ ಇದಕ್ಕೆ ಯಾವುದೇ ರಸೀದಿ ಅಥವಾ ಬಿಲ್ ನೀಡುತ್ತಿಲ್ಲ ಎಂದು ಮಂಡಳಿಗಳ ಪ್ರತಿನಿಧಿಗಳು ಸಭೆಯ ಗಮನಕ್ಕೆ ತಂದರು. ಈ ಕುರಿತು ಸೂಕ್ತ ಕ್ರಮ ಕ್ರಮಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಪರಿಸರ ಮಾಲಿನ್ಯ ನಿಯಂತ್ರಣಾಧಿಕಾರಿ ಲೋಕೇಶ ಎಚ್.ಕೆ, ಡಿ.ವಾಯ್.ಎಸ್‌ಪಿ ಗಜಾನನ ಸುತಾರ ಸೇರಿದಂತೆ ಗಣೇಶ ಉತ್ಸವ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ......

ಹಿರಿಯ ನಾಯಕ ಕೆ.ಶಾಂತಪ್ಪ ಆಯ್ಕೆ

ಮೃದುವಾದ ಮಾತು, ಎಲ್ಲರಿಗೂ ಗೌರವ ನೀಡುವ ಸ್ವಭಾವದವರು. ಹಾಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿದ್ದಾರೆ.

ಬಣಬಡಿದಾದ ನಡುವೆ ಅವಕಾಶ ವಂಚಿತ: ಜಿಲ್ಲೆಯ ಹಿರಿಯ ನಾಯಕರಾದರು ಕೆ.ಶಾಂತಪ್ಪನವರಿಗೆ ಉನ್ನತ ಹುದ್ದೆಗಳು ಸಿಕ್ಕಿರಲಿಲ್ಲ ಎಂದು ಹೇಳಲಾಗುತ್ತಿದೆ. ಕಾಂಗ್ರೆಸ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಪಟ್ಟಿಯಲ್ಲಿ ಸ್ಪರ್ಧಿಸಿದ್ದ ಮಾಜಿ ಸಚಿವರು ಹಾಲಿ ವಿಧಾನ ಪರಿಷತ್ ಸದಸ್ಯ ಎನ್ ಎಸ್ ಬೋಸರಾಜು ಹಾಗೂ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಬಣದ ಅಭ್ಯರ್ಥಿಗಳ ನಡುವೆ ತೀವ್ರ ತೀವ್ರ ಪೈಪೋಟಿಯ ನಡುವೆ ಎನ್ ಎಸ್ ಬೋಸರಾಜು ಬಣ ಮೇಲುಗೈ ಸಾಧಿಸಿದ್ದು ಕೆ.ಶಾಂತಪ್ಪ ಕೊನೆಗೆ ಅಧ್ಯಕ್ಷರಾಗಿದರು.ವೈಯಕ್ತಿಕ ವರ್ಚಸ್ಸು, ಸೇವಾ ಹಿರಿತನ, ಸಾಮಾಜಿಕ ನ್ಯಾಯ ಅಂಶದ ಆಧಾರದ ಮೇಲೆ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ವಿಶ್ಲೇಷಣೆ ಮಾಡಲಾಗುತ್ತಿದೆ.

ಕಣದಲ್ಲಿದ್ದ ಅಭ್ಯರ್ಥಿಗಳು: ಕಾಂಗ್ರೆಸ್ ಜಿಲ್ಲಾಧ್ಯಕ್ಷರ ನೇಮಕಾತಿಗೆ ಸಂಬಂಧಿಸಿದಂತೆ ಎರಡು ಬಣಗಳು ಪ್ರತ್ಯೇಕಪಟ್ಟಿಯನ್ನು ಕೆಪಿಸಿಸಿಗೆ ಸಲ್ಲಿಸಲಾಗುತ್ತು ಎನ್ನಲಾಗಿದ್ದು, ಎನ್ ಎಸ್ ಬೋಸರಾಜು ಅವರ ಬಣದಿಂದ ಲಿಂಗಾಯತ ಸಮುದಾಯದ ಸೋಮನಗೌಡ ಬಾದರ್ಲಿ, ಮಲ್ಲಿಕಾರ್ಜುನ ಯದ್ದಲದಿನ್ನಿ, ಹಿಂದುಳಿದ ವರ್ಗದಿಂದ ಕೆ.ಶಾಂತಪ್ಪ, ನಿರುಪಾದೆಪ್ಪ ಗುಡಿಹಾಳ ವಕೀಲ, ಅಲ್ಪಸಂಖ್ಯಾತ ಕೋಟಾದಿಂದ ಮೊಹಮ್ಮದ್ ಶಾಲಂ ರಾಯಚೂರು, ಪರಿಶಿಷ್ಟ ಜಾತಿಯಿಂದ ಚಂದ್ರಶೇಖರ ಕುರ್ಡಿ ಅವರ ಹೆಸರನ್ನು ಕೆಪಿಸಿಸಿಗೆ ಕಳುಹಿಸಿದರೆ, ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಎ.ವಸಂತ ಕುಮಾರ ನೇತೃತ್ವದ ಬಣದಿಂದ ಲಿಂಗಾಯತ ಸಮುದಾಯದ ಶರಣೇಗೌಡ ಬಯ್ಯಾಪುರ, ಪರಿಶಿಷ್ಟ ಪಂಗಡದಿಂದ ಶಾಸಕ ಬಸನಗೌಡ ದದ್ದಲ್, ಅಲ್ಪಸಂಖ್ಯಾತ ಕೋಟಾದಡಿ ಅಬ್ದುಲ್ ಕರೀಂ, ಪರಿಶಿಷ್ಟ ಜಾತಿಯಿಂದ ಪಾಮಯ್ಯ ಮುರಾರಿ, ಹಿಂದುಳಿದ ವರ್ಗದಿಂದ ಎಂ.ಈರಣ್ಣ ಮಾನ್ವಿ ಅವರ ಹೆಸರುಗಳನ್ನು ಕೆಪಿಸಿಸಿ ಕಳುಹಿಸಲಾಗಿತ್ತು ಎಂದು ತಿಳಿದುಬಂದಿದೆ.

ಕೊಲೆ ಪ್ರಕರಣದ ಆರೋಪಿಗಳ ಬಂಧನ

ಡಿ.ಎಸ್.ಪಿ ಸಿಂಧನೂರು ಅವರು ಆರೋಪಿ 1) ಗುಂಡ್ಯಾ ತಂದೆ ರಾಮಣ್ಣ, 36 ವರ್ಷ, ವಡ್ಡರ್ ಜನಾಂಗ, ಸಾ: ಹೊಕ್ರಾಣಿ ಈತನನ್ನು ಬಂಧಿಸಿ, ಶವದ ತನಿಖಾ ಪಂಚನಾಮೆ ಹಾಗೂ ಕೃತ್ಯ ಸ್ಥಳದ ಪಂಚನಾವೆು ಪೂರ್ಣಗೊಳಿಸಿ, ಪ್ರಕರಣವು ಎಸ್.ಸಿ/ಎಸ್.ಟಿ ಕಾಯ್ದೆಯಡಿಯಲ್ಲಿರುವುದರಿಂದ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ದಿನಾಂಕ 22.08.2026 ರಂದು ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ ರಾಯಚೂರು ರವರಿಗೆ ವರ್ಗಾವಣೆ ಮಾಡಿರುತ್ತಾರೆ.

ಪ್ರಕರಣದ ಮುಂದಿನ ತನಿಖೆಯನ್ನು ಪೊಲೀಸ್ ಉಪಾಧೀಕ್ಷಕರು ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯ ರಾಯಚೂರು ಪೊಲೀಸ್ ಠಾಣೆ ಅವರು ಕೈಗೊಂಡು, ಡಿ.ಸಿ.ಆರ್.ಇ ವಿಭಾಗದ ಎಡಿಜಿಪಿಗಳಾದ ಪಿ.ಹರಿಶೇಖರನ್ ಅವರು ಮಾರ್ಗದರ್ಶನದಲ್ಲಿ ಪ್ರಕರಣದ ಇನ್ನಿತರ ಆರೋಪಿಗಳಾದ ಆರೋಪಿ ಸಂಖ್ಯೆ 2. ಮಹಾಂತೇಶ ವಡ್ಡರು 20 ವರ್ಷ ಸಾ: ತೊಕ್ರಾಣಿ. 3. ವಿರೇಶ 23 ವರ್ಷ, ಮಾದಿಗ ಸಾ: ಹೊಕ್ರಾಣಿ, 4. ಅಭಿಷೇಕ 24 ವರ್ಷ, ಜಂಗಮ ಜನಾಂಗ ಸಾ: ಆಫೀಪರ್ ಕಾಲೋನಿ, ರಾಯಚೂರು ನಗರ ಇವರುಗಳನ್ನು ದಿನಾಂಕ: 22.08.2026 ರಂದು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ದಿನಾಂಕ 19.08.2026 ರಂದು ಕುಮಾರಿ ಅಶ್ವಿನಿರವರು ಹೊಕ್ರಾಣಿ ಗ್ರಾಮದಲ್ಲಿ ಬಹಿರ್ದೆಸೆಗೆಂದು ಬೀರಪ್ಪನ ಗುಡಿಯ ಕಡೆಗೆ ಹೋದಾಗ ಆರೋಪಿಗಳು ಅಪಹರಿಸಿ, ಅತ್ಯಾಚಾರ ಮಾಡಿ, ವಿಷಯ ಬಹಿರಂಗವಾಗದಿರಲು ಅಶ್ವಿನಿಯನ್ನು ಕೊಲೆ ಮಾಡಿರುವುದು ತನಿಖೆಯಲ್ಲಿ ತಿಳಿದು ಬಂದಿದ್ದು, ಪ್ರಕರಣದ ಮುಂದಿನ ತನಿಖೆ ಮುಂದುವರೆದಿದೆ ಎಂದು ರಾಯಚೂರಿನ ನಾಹಜಾನಿ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕರಾದ ರಾಜಕುಮಾರ ವಾಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.ಕೆ.ಶಿವಕುಮಾರ್ ನೇತೃತ್ವದ ಸರಕಾರ ಸರಿಯಾದ ಹಾದಿಯಲ್ಲಿ ಸಾಗುತ್ತಿದೆ

ಮುಖ್ಯವಾದಂತಹ ಇಲಾಖೆಗಳಲ್ಲಿ ಮಾಡಿರುವಂತಹ ಸಾಧನೆಗಳಳನ್ನು ಒಳಗೊಂಡಿರುವಂತಹ ಕೈಪಿಡಿಯನ್ನು ಜನರ ಮುಂದಿಟ್ಟಿದ್ದಾರೆ ಎಂದರು.

ಯಾವುದೇ ಸರ್ಕಾರ ಜನರಿಗೆ ಉತ್ತರದಾಯಿಯಾಗಿ ನಡೆದುಕೊಳ್ಳಬೇಕು. ಅದು ಸರ್ಕಾರದ ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಮೂಲ ಆಶಯ. ನಾವು 2023ರ ಮೇ 20ರಂದು ಅಧಿಕಾರಕ್ಕೆ ಬಂದೆವು. ಅದಕ್ಕಿಂತ ಮುಂಚೆ ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ.ಕೆ ಶಿವಕುಮಾರ್ ಹಾಗೂ ನಾವೆಲ್ಲರೂ ಜನತೆಯ ಮುಂದೆ 5 ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿದ್ದೆವು. ಈ ವೇಳೆ ವಿರೋಧ ಪಕ್ಷದವರು ಟೀಕೆ ಮಾಡಿದ್ದರು. ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ, ಒಂದು ವೇಳೆ ಜಾರಿ ಮಾಡಿದರೆ ರಾಜ್ಯದ ಆರ್ಥಿಕ ಪರಿಸ್ಥಿತಿ ದಿವಾಳಿಯಾಗುತ್ತದೆ ಎಂದಿದ್ದರು. ಸರ್ಕಾರದಲ್ಲಿ ಅಭಿವೃದ್ಧಿಗೆ ಹಣ ಇರುವುದಿಲ್ಲ ಎಂದು ಬಹಳ ಟೀಕೆಗಳನ್ನು ಮಾಡಿದ್ದರು. ಪ್ರಧಾನ ಮಂತ್ರಿ ಆದಿಯಾಗಿ ಎಲ್ಲರೂ ಕೂಡ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ ಎಂದರು.

ನಾನು ಮುಖ್ಯಮಂತ್ರಿಯಾಗಿ, ಡಿ.ಕೆ ಶಿವಕುಮಾರ್ ಉಪಮುಖ್ಯಮಂತ್ರಿಯಾಗಿ 3 ವರ್ಷಕ್ಕೂ ಹೆಚ್ಚು ಕಾಲ ಗ್ಯಾರಂಟಿ ಯೋಜನೆಗಳನ್ನು ನೀಡಿದ್ದೆವು. ಅಧಿಕಾರಕ್ಕೆ ಬಂದ ಮೊದಲನೇ ವರ್ಷದಲ್ಲಿಯೇ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದೆವು. ಪ್ರತಿವರ್ಷ ಸುಮಾರು 52 ಸಾವಿರ ಕೋಟಿ ರೂ. ಖರ್ಚಾಗುತ್ತದೆ. ಅಷ್ಟೊಂದು ಹಣವನ್ನು ಭರಿಸಲು ಸಾಧ್ಯವಿಲ್ಲ ಎಂದು ವಿರೋಧ ಪಕ್ಷದವರು ಹೇಳುತ್ತಿದ್ದರು. 52 ಸಾವಿರ ಕೋಟಿ ರೂ. ಹಣವನ್ನು ಸರಕಾರವೇ ಭರಿಸಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಜನರಿಗೆ ತಲುಪಿಸುವಂತ ಕೆಲಸವನ್ನು ಮಾಡಿತ್ತು ಎಂದು ತಿಳಿಸಿದರು.

ಸರ್ಕಾರ ಸಮಾಜದಲ್ಲಿ ಇರುವಂತಹ ಎಲ್ಲ ಜಾತಿಯ ಬಡವರನ್ನು ಗುರುತಿಸಿ 5 ಗ್ಯಾರಂಟಿ ಯೋಜನೆಗಳನ್ನು ಅವರಿಗೆ ತಲುಪಿಸುವ ಕೆಲಸವನ್ನು ಮಾಡಿದೆ. ಅದರ ಜೊತೆಗೆ ನಮ್ಮ ಪ್ರಣಾಳಿಕೆ ಮೂಲಕ ಇನ್ನೂ ಬೇರೆ ವಾಗ್ದಾನಗಳನ್ನು ಮಾಡಿದ್ದೆವು. ಅವುಗಳನ್ನು ಕೂಡ ಪೂರೈಸುವ ಕೆಲಸವನ್ನು ಮಾಡಲಾಯಿತು. ಅಭಿವೃದ್ಧಿ ಕೆಲಸಗಳಿಗೆ ಕೂಡ ಹಣವನ್ನು ಒದಗಿಸುವ ಕೆಲಸವನ್ನು ಮಾಡಿದ್ದೇವೆ. ಅಭಿವೃದ್ಧಿ ಕೆಲಸಗಳು ಯಾವುದೂ ಕುಂಠಿತವಾಗಿಲ್ಲ. ಕಾಂಗ್ರೆಸ್ ಪಕ್ಷ ಮಾತ್ರ ಪ್ರಣಾಳಿಕೆಯನ್ನು ಮುಂದಿಟ್ಟುಕೊಂಡು ಬಜೆಟ್ ಅನ್ನು ರೂಪಿಸುತ್ತದೆ. ಉಳಿದ ಎಲ್ಲ ರಾಜಕೀಯ ಪಕ್ಷಗಳು ಪ್ರಣಾಳಿಕೆಯನ್ನು ಹೊರಡಿಸುತ್ತವೆ. ಆದರೆ ಅವುಗಳನ್ನು ಕಣ್ಣೆತ್ತಿಯೂ ನೋಡುವುದಿಲ್ಲ ಎಂದು ಟೀಕಿಸಿದರು.

ಪ್ರಣಾಳಿಕೆಯಲ್ಲಿ ಇರುವ ಭರವಸೆಗಳನ್ನು ಒಂದೇ ವರ್ಷದಲ್ಲಿ ಜಾರಿ ಮಾಡಬೇಕು ಎಂದೇನಿಲ್ಲ. 5 ವರ್ಷಗಳು ಅವಕಾಶವಿದೆ. ಆ 5 ವರ್ಷಗಳಲ್ಲಿ ಎಲ್ಲ ಭರವಸೆಗಳನ್ನು ಈಡೇರಿಸುವಂತಹ ಕೆಲಸವನ್ನು ಮಾಡಬೇಕು. ಉದಾಹರಣೆಗೆ 2013ರಲ್ಲಿ ನಾವು ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ, ಪ್ರಣಾಳಿಕೆಯ ಮೂಲಕ ಜನರಿಗೆ 165 ವಾಗ್ದಾನಗಳನ್ನು ಕೊಟ್ಟಿದ್ದೆವು. ಅವುಗಳ ಪೈಕಿ 158ಕ್ಕೂ ಹೆಚ್ಚು ವಾಗ್ದಾನಗಳನ್ನು ಜಾರಿ ಮಾಡಿದ್ದೇವೆ. ಯಾವುದಾದರೂ ಪಕ್ಷ ಅಥವಾ ಸರ್ಕಾರ ನುಡಿದಂತೆ ನಡೆಯುವ ಸರ್ಕಾರವಿದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ. ಬಿಜೆಪಿಯವರು, ಜೆಡಿಎಸ್ನವರು ಸೇರಿದಂತೆ ಬೇರೆ ಯಾವ ಪಕ್ಷದವರೂ ಕೂಡ ಇದನ್ನು ಮಾಡಿಲ್ಲ. ನಾವು ಎಲ್ಲ ಭರವಸೆಗಳನ್ನು ಈಡೇರಿಸುವ ಜೊತೆಗೆ ಅನೇಕ ಕಾರ್ಯಕ್ರಮಗಳನ್ನು ನೀಡಿದ್ದೇವೆ. ಕೃಷಿಭಾಗ್ಯ, ಶೂ ಭಾಗ್ಯ, ಪಂಚ ಗ್ಯಾರಂಟಿ ಯೋಜನೆಗಳು ಹೀಗೆ ಅನೇಕ ಯೋಜನೆಗಳನ್ನು ಜಾರಿಗೆ ಮಾಡಿದ್ದೇವೆ ಎಂದು ನುಡಿದರು.

ಎಷ್ಟೇ ಟೀಕೆಗಳು ಬಂದರೂ, ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸಿಕೊಂಡು ಹೋಗಬೇಕು. ಯಾಕೆಂದರೆ ಗ್ಯಾರಂಟಿ ಯೋಜನೆಗಳು ಅಸಮಾನತೆಯನ್ನು ತೊಲಗಿಸುವಂತಹ ಕಾರ್ಯಕ್ರಮಗಳಾಗಿವೆ. ಹೀಗಾಗಿ ಅವುಗಳು ಮುಂದುವರಿಬೇಕು. ಬಾಬಾ ಸಾಹೇಬ್ ಅಂಬೇಡ್ಕರ್ 'ಎಲ್ಲಿಯವರೆಗೆ ಈ ದೇಶದಲ್ಲಿ ಅಸಮಾನತೆ ಹೋಗುವುದಿಲ್ಲವೋ ಅಲ್ಲಿಯವರೆಗೆ ಸಮ ಸಮಾಜವನ್ನು ನಿರ್ಮಾಣವನ್ನು ಮಾಡಲು ಸಾಧ್ಯವಿಲ್ಲ' ಎಂದಿದ್ದರು. ಸ್ವಾತಂತ್ರ್ಯ ಬಂದು ಇನ್ನೇನೂ 80 ವರ್ಷಗಳಾಗಲಿವೆ, ಸಂವಿಧಾನ ಬಂದು 76 ವರ್ಷಗಳಾಗಿ ಹೋಗಿದೆ. ಸಂವಿಧಾನದ ಆಶಯಗಳನ್ನು ಪೂರೈಸುವಂತದ್ದು ಯಾವುದೇ ಚುನಾಯಿತ ಸರ್ಕಾರದ ಕರ್ತವ್ಯವಾಗಿದೆ. ಇದನ್ನು ನಾವು ಅರ್ಥ ಮಾಡಿಕೊಳ್ಳಬೇಕಾಗುತ್ತದೆ ಎನ್ನುವ ಎಚ್ಚರಿಕೆಯ ನುಡಿಗಳನ್ನಾಡಿದರು.

ಎಲ್ಲ ಜನರಿಗೆ ಕೂಡ ಸಾಮಾಜಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಶಕ್ತಿಯನ್ನು ತುಂಬಬೇಕು. ಬಹುಶಃ ಕಾಂಗ್ರೆಸ್ ಪಕ್ಷದ ಧ್ಯೇಯ, ಸಿದ್ಧಾಂತ ಕಟ್ಟಕಡೆಯ ಜನರಿಗೂ ನ್ಯಾಯವನ್ನು ಒದಗಿಸಿಕೊಡುವಂತದ್ದಾಗಿದೆ. ಎಲ್ಲರಿಗೂ ಸಾಮಾಜಿಕ ನ್ಯಾಯ, ಸಮಸಮಾಜ ನಿರ್ಮಾಣ ಮಾಡುವಂತದ್ದು ಸರ್ಕಾರದ ಕರ್ತವ್ಯ. ಸಂವಿಧಾನದ ಕರ್ತೃಗಳು ಈ ಕನಸನ್ನು ಕಂಡಿದ್ದರು, ಆ ಕನಸನ್ನು ನನಸಾಗಿ ಮಾಡುವಂತಹದ್ದು ನಮ್ಮ ಕರ್ತವ್ಯವಾಗಿದೆ ಎಂದರು.

ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಅನೇಕ ಹೊಸ ಚಿಂತನೆಗಳು ಹಾಗೂ ಹೊಸ ಕಾರ್ಯಕ್ರಮಗಳನ್ನು ಜನರಿಗೆ ನೀಡುವ ಕೆಲಸ ಮಾಡುತ್ತಿದೆ. ಈ ಸರ್ಕಾರ ಸರಿಯಾದ ದಾರಿಯಲ್ಲಿ ನಡೆಯುತ್ತಿದೆ ಎಂದು ನನಗೆ ಅನಿಸುತ್ತಿದೆ ಎಂದ ಅವರು ಅದಕ್ಕಾಗಿ ಡಿ.ಕೆ. ಶಿವಕುಮಾರ್ ಅವರಿಗೆ ಹಾಗೂ ಅವರ ಸಂಪುಟದ ಎಲ್ಲ ಸಚಿವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಇನ್ನೂ ಒಂದೂವರೆ ವರ್ಷಕ್ಕೂ ಹೆಚ್ಚು ಕಾಲಾವಕಾಶವಿದೆ. ಉಳಿದಿರುವ ಅವಧಿಯಲ್ಲಿ ಸರ್ಕಾರ ಜನರಿಗೆ ನೀಡಿರುವ ಎಲ್ಲಾ ಭರವಸೆಗಳು ಹಾಗೂ ವಾಗ್ದಾನಗಳನ್ನು ಈಡೇರಿಸುವ ಕೆಲಸ ಮಾಡಲಿ ಎಂದು ಆಶಿಸುತ್ತೇನೆ. ಕಾಂಗ್ರೆಸ್ನ ಇತಿಹಾಸವೇ ಬಡವರಿಗೆ ಶಕ್ತಿ ನೀಡುವಂತಹದ್ದು. ಸಮಾಜದಲ್ಲಿನ ದೌರ್ಜನ್ಯ ಮತ್ತು ಶೋಷಣೆಯನ್ನು ನಿಲ್ಲಿಸುವುದು, ಎಲ್ಲರಿಗೂ ಸಮಾನ ಅವಕಾಶಗಳನ್ನು ಒದಗಿಸುವುದು ಕಾಂಗ್ರೆಸ್ನ ಮೂಲ ಆಶಯವಾಗಿದೆ ಎಂದು ಪಕ್ಷದ ಧ್ಯೇಯೋದ್ದೇಶಗಳನ್ನು ಸ್ಮರಿಸಿದರು.

ಕೇಂದ್ರ ಸರ್ಕಾರದ ಮೇಲೆ ಒತ್ತಡ : ಮಹಿಮಾ ಪಟೇಲ್

ಆದಾಗಿಯೂ ಕೇಂದ್ರ ಸರ್ಕಾರ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಲ್ಲಿ ವಿಳಂಬ ಮಾಡುತ್ತಿದೆ, ಈಗಾಗಲೇ ನಂಜುಂಡಪ್ಪ ವರದಿ ಶಿಫಾರಸ್ಸಿನಂತೆ ರಾಯಚೂರಿನಲ್ಲಿ ಐಐಟಿ ಅನ್ನು ಸ್ಥಾಪಿಸಬೇಕಾಗಿತ್ತು, ರಾಜಕೀಯ ಕಾರಣಗಳಿಗಾಗಿ ಅದನ್ನು ಧಾರವಾಡದಲ್ಲಿ ಸ್ಥಾಪನೆ ಮಾಡಿ ರಾಯಚೂರಿಗೆ ಬಹುದೊಡ್ಡ ಅನ್ಯಾಯ ಮಾಡಲಾಗಿದೆ,ಮೇಲಾಗಿ ವಿಶೇಷ ಸ್ಥಾನಮಾನಕ್ಕೆ ಒಳಪಟ್ಟ ಕಲ್ಯಾಣ ಕರ್ನಾಟಕ ಪ್ರದೇಶದ ಮಹತ್ವಕಾಂಕ್ಷಿ ಜಿಲ್ಲೆಗೆ ಕೇಂದ್ರ ಸರಕಾರ ವಿಳಂಬ ಮಾಡದೆ ಶೀಘ್ರದಲ್ಲಿಯೇ ಏಮ್ಸ್ ಅನ್ನು ಮಂಜೂರು ಮಾಡಲೇಬೇಕು, ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಾಗುತ್ತದೆ" ಎಂದು ಭರವಸೆ ನೀಡಿದರು.

ಅತಿಥಿಗಳಾಗಿ ಆಗಮಿಸಿದ್ದ ವಚನ ಟಿವಿ ಸಂಪಾದಕ ಸಿದ್ದು ಯಾಪಲಪರವಿ ಮತ್ತು ಸರ್ವೋದಯದ ಮುಖಂಡ ಬಸವಲಿಂಗಪ್ಪ ಹೋರಾಟವನ್ನು ಉದ್ದೇಶಿಸಿ ಮಾತನಾಡಿದರು.

ಇಂದಿನ ಅನಿರ್ದಿಷ್ಟ ಧರಣಿ ಸತ್ಯಾಗ್ರಹದಲ್ಲಿ ಡಾ.ಬಸವರಾಜ್ ಕಳಸ, ಅಶೋಕ್ ಕುಮಾರ್ ಜೈನ್, ಭಾರದ್ವಾಜ್, ಎಸ್. ಹನುಮಂತಪ್ಪ, ಎಸ್. ತಿಮ್ಮಾರೆಡ್ಡಿ, ಜಾನ್ ವೆಸ್ಲಿ, ವೆಂಕಟರೆಡ್ಡಿ ದಿನ್ನಿ, ಡಾ.ಜಗದೀಶ್ ಪೂರತಿಪ್ಲಿ, ಎಸ್ .ಮಾರಪ್ಪ ವಕೀಲರು, ಬಸವರಾಜ್ ಭಂಡಾರಿ, ಆಂಜನೇಯ ಕುರುಬದೊಡ್ಡಿ, ಮಹಿಮಾ ಪಟೇಲ್, ಸಿದ್ದು ವ್ಯಾಪಲಪರ್ವಿ, ಸಾಧಿಕ್ ಖಾನ್ ಯರಗೇರಾ ,ವಿನಯ್ ಕುಮಾರ್ ಚಿತ್ರಗಾರ, ವೀರಭದ್ರಯ್ಯ ಸ್ವಾಮಿ, ಶ್ರೀನಿವಾಸ್ ಜೋಶಿ, ಡಿ. ಮಹಾದೇವಪ್ಪ, ಬಸವರಾಜ್ ಕುರುಗೋಡ್, ವೇಣು ಜಾಲಿಬೆಂಚಿ, ಹೇಮರಾಜ್ ಅಸ್ಕಿಹಾಳ್ ,ಪ್ರಸನ್ನ ಆಲಮ್ಪಲ್ಲಿ, ಜೈ ಭೀಮ್ ವಲ್ಲಭ, ರವೀಂದ್ರನಾಥ್ ಪಟ್ಟಿ ,ನರಸಿಂಹಲು ಮರ್ಚೆಟ್ ಹಾಲ,ತಾಯಣ್ಣ ಗದರ್, ಲಕ್ಷ್ಮಣ ಕಲ್ಲೂರ್, ಸೈದುದ್ದೀನ್ ಮುಂತಾದವರು ಭಾಗವಹಿಸಿದ್ದರು.

ಜಿಲ್ಲಾಡಳಿತದಿಂದ ಅಗತ್ಯ ಸಹಕಾರ: ಪೂವಿತಾ ಎಸ್.

ಸಮ್ಮೇಳನಕ್ಕೆ ಮುಖ್ಯಮಂತ್ರಿ ಚಾಲನೆ ನೀಡುವ ಸಾಧ್ಯತೆಯಿದ್ದು, ಡಿಸೆಂಬರ್ ಕೊನೆಯ ವಾರ ಅಥವಾ ಜನವರಿ ಮೊದಲ ವಾರದಲ್ಲಿ ಕಾರ್ಯಕ್ರಮ ಆಯೋಜಿಸುವ ಕುರಿತು ಚಿಂತನೆ ನಡೆದಿದೆ ಎಂದು ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸ್ವಾಗತ ಸಮಿತಿ ರಚಿಸಲಾಗುವುದು. ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಪತ್ರಕರ್ತರನ್ನು ಒಳಗೊಂಡಂತೆ ವಿವಿಧ ಸಮಿತಿಗಳನ್ನು ರಚಿಸಿ ಸಮ್ಮೇಳನದ ವ್ಯವಸ್ಥೆಗಳನ್ನು ಕೈಗೊಳ್ಳಲಾಗುವುದು. ಜಿಲ್ಲಾಮಟ್ಟದ ಅಧಿಕಾರಿಗಳ ಸಭೆ ನಡೆಸಿ ಸಮ್ಮೇಳನಕ್ಕೆ ಅಗತ್ಯ ಸಹಕಾರ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿ ಪೂವಿತಾ ಎಸ್., ಸಮ್ಮೇಳನದ ಯಶಸ್ಸಿಗೆ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಲಾಗುವುದು. ಸಮ್ಮೇಳನಕ್ಕೆ ಸಂಬಂಧಿಸಿದ ವ್ಯವಸ್ಥೆಗಳ ಕುರಿತು ಸಂಬಂಧಿಸಿದ ಎಲ್ಲ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವುದಾಗಿ ಭರವಸೆ ನೀಡಿದರು.

ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ್, ಉಪಾಧ್ಯಕ್ಷ ಮಹಾನಂದ್ ನಾಯಕ್, ಖಜಾಂಚಿ ಮಲ್ಲಿಕಾರ್ಜುನಯ್ಯ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಶಿವಪ್ಪ ಮಡಿವಾಳರ್, ಸುರೇಶ್ ರೆಡ್ಡಿ, ನೀಲಕಂಠ ಸ್ವಾಮಿ, ಲಕ್ಷ್ಮಣ ಕಪಗಲ್, ಪ್ರಸನ್ನಕುಮಾರ್ ಜೈನ್, ಸಂಘದ ಸದಸ್ಯರಾದ ರಾಚಯ್ಯ ಸ್ವಾಮಿ, ಗುರುತುಂಗ, ಪ್ರಭಾಕರ್ ಹುಡೇದ್, ಮುತ್ತಣ್ಣ ಕಬ್ಬಿಣದ್, ಕೃಷ್ಣ ಇನಾಮ್ದಾರ್, ಮಂಜು ಎತ್ತಿನಮಾಳಿಗೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಿಸಿಟಿವಿ ದೃಶ್ಯಾವಳಿ ನೀಡಿದ ಪಿ.ಎಸ್.ಐಗಳ ವಿರುದ್ಧ ಕ್ರಮಕ್ಕೆ ಶಿಫಾರಸ್ಸು

ಆ ಅವಧಿಯಲ್ಲಿ ಪಿ.ಎಸ್.ಐ.ಗಳಾಗಿ ಕಾರ್ಯನಿರ್ವಹಿಸಿದ ಗೀತಾಂಜಲಿ ಸಿಂದೆ, ಅವಿನಾಶ ಕಾಂಬಳೆ, ಹಾಗೂ ಗುರುಚಂದ್ರ ಯಾದವ ಅವರಿಗೆ ಅನುಕ್ರಮವಾಗಿ 25 ಸಾವಿರ, 15 ಸಾವಿರ ಹಾಗೂ 25 ಸಾವಿರ ದಂಡ ವಿಧಿಸಿತ್ತು. ಆದರೆ ಪ್ರತಿವಾದಿ ಪಿ.ಎಸ್.ಐ.ಗಳು ದಂಡ ಪಾವತಿ ಮಾಡಿದರೂ ಸಿ.ಸಿ. ಟಿ.ವಿ. ದೃಶ್ಯಾವಳಿ ನೀಡಿರಲಿಲ್ಲವಾದ್ದರಿಂದ ಮೂರು ಜನ ಪಿ.ಎಸ್.ಐ.ಗಳ ವಿರುದ್ಧ ಸೂಕ್ತ ಕ್ರಮಕ್ಕೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದ ಆಯುಕ್ತರಾದ ಶ್ರೀ ಬಿ.ವೆಂಕಟ ಸಿಂಗ್ ಶಿಫಾರಸ್ಸು ಮಾಡಿ ಆದೇಶ ಮಾಡಿರುತ್ತಾರೆ.

ಬಳಿಕ ಸಿರಿವಾರ ಪೊಲೀಸ್ ಠಾಣೆಗೆ ಪಿ.ಎಸ್.ಐ.ಆಗಿ ಸೇವೆಗೆ ಬಂದ ಪಿ.ಎಸ್.ಐ.ಬಸನಗೌಡ ಮೇಲ್ಮನವಿದಾರರು ಕೋರಿದ ಸಿ.ಸಿ.ಟಿ.ವಿ. ದೃಶ್ಯಾವಳಿ ನೀಡಲು ಅನುಕೂಲವಾಗುವಂತೆ ರೀಟ್ರಿವ್ ಮಾಡಲು ಕೋರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪತ್ರ ಬರೆದು ಕೋರಿದ ಹಿನ್ನಲೆಯಲ್ಲಿ ದಿನಾಂಕ:02-01-2025 ರಂದು ಸಿರವಾರ ಠಾಣೆಗೆ ಆಗಮಿಸಿದ ತಾಂತ್ರಿಕ ತಂಡ ಸಿ.ಸಿ. ಟಿ.ವಿ. ದೃಶ್ಯಾವಳಿ ಸಂಗ್ರಹ ಇರುವ ಹಾರ್ಡ ಡಿಸ್ಕ್ ಪರಿಶೀಲನೆ ಮಾಡಲಾಗಿ, ಸದರಿ ಹಾರ್ಡ ಡಿಸ್ಕ್ನಲ್ಲಿ ಕೇವಲ 15 ತಿಂಗಳ ಸಿಸಿ ಟಿ.ವಿ. ದೃಶ್ಯಾವಳಿ ಮಾತ್ರ ಸಂಗ್ರಹವಿದ್ದು, ಅದಕ್ಕಿಂತ ಮುಂಚಿನ ದೃಶ್ಯಾವಳಿ ಸಂಗ್ರಹ ವಿಲ್ಲವೆಂದು ನೀಡಿದ ವರದಿಯನ್ನ ಮೇಲ್ಮನವಿದಾರರಿಗೆ ದಿನಾಂಕ: 02-01-2025 ರಂದು ಹಿಂಬರಹ ನೀಡಿದ್ದರು. ಹೀಗಾಗಿ ಮೇಲ್ಮನವಿದಾರ ಕೋರಿದ ಮಾಹಿತಿ ಸಕಾಲಕ್ಕೆ ನೀಡದ ನಿರ್ಲಕ್ಷ್ಯ ವಹಿಸಿದ ಕಾರಣ ಆಯುಕ್ತರು ಮೇಲಿನಂತೆ ಶಿಫಾಸ್ಸು ಮಾಡಿ ಆದೇಶ ಮಾಡಿದ್ದಾರೆ.

ಮೇಲ್ಮನವಿದಾರರು ಕೋರಿದ ಮಾಹಿತಿ ಸಕಾಲಕ್ಕೆ ನೀಡದೆ ಇರುವುದು ಸೇರಿದಂತೆ ಸುಪ್ರೀಂ ಕೋರ್ಟ ಎಸ್.ಎಲ್.ಪಿ. (ಕ್ರಿಮಿನಲ್)ನಂ. 3543/2020ರ ಆದೇಶ ಉಲ್ಲಂಘನೆ ಮಾಡಿರುವುದು ಸಾಬಿತಾಗಿರುವುದರಿಂದ ಪ್ರತಿವಾದಿ ಪಿ.ಎಸ್.ಐ.ಗಳಾಗಿದ್ದ ಗೀತಾಂಜಲಿ ಸಿಂದೆ, ಅವಿನಾಶ ಕಾಂಬಳೆ, ಹಾಗೂ ಗುರುಚಂದ್ರ ಯಾದವ ಅವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮದಂತೆ ಅನ್ವಯವಾಗುವ ಶಿಸ್ತುಕ್ರಮ ಕೈಗೊಳ್ಳುವಂತೆ ಆಯೋಗ ಮಾಡಿದ ಆದೇಶದಂತೆ ಪೊಲೀಸ್ ಕಾಯ್ದೆ ನಿಯಮ 7 (ರೂಲ್-7) ರ ಪ್ರಕಾರ ನೋಟಿಸ್ ಜಾರಿ ಮಾಡಿದ ರಾಯಚೂರು, ಬಳ್ಳಾರಿ ಮತ್ತು ವಿಜಯನಗರ ಬಗ್ಗೆ ಜಿಲ್ಲಾ ವರಿಷ್ಠಾಧಿಕಾರಿಗಳು ಶಿಸ್ತು ಕ್ರಮಕ್ಕೆ ಮುಂದಾಗಿದ್ದು, ಈ ಕೈಗೊಂಡ ಕ್ರಮ ಪಾಲನಾ ವರದಿ ನೀಡುವಂತೆ ಮೂರು ಜಿಲ್ಲೆಯ ವರಿಷ್ಠಾಧಿಕಾರಿಗಳಿಗೆ ಆಯೋಗ ಆದೇಶ ನೀಡಿದೆ.

ಮುಂದುವರಿದ ಸುಪ್ರೀಂಕೋರ್ಟ ತೀರ್ಪಿನಂತೆ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಇರುವ ಸಿಸಿ ಟಿ.ವಿ. ದೃಶ್ಯಾವಳಿ ಸಂಗ್ರಹಿಸಲು ಅಗತ್ಯವಾದ ಸಂಗ್ರಹ ಸಾಮರ್ಥ್ಯದ ಹಾರ್ಡ ಡಿಸ್ಕ್ ಹಾಗೂ ಸಿಸಿ ಟಿ.ವಿ.ಗಳು ಕಾರ್ಯನಿರ್ವಹಿಸುವಂತೆ ಸುಸ್ಥಿತಿಯಲ್ಲಿ ಇಟ್ಟು 18 ತಿಂಗಳ ಕಾಯ್ದಿರಿಸುವಂತೆ ಕ್ರಮ ಕೈಗೊಳ್ಳಲು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರಾದ ಡಾ.ಎಂ. ಎಸ್.ಸಲೀಂ ಅವರಿಗೆ ಆಯೋಗ ಸೂಚಿಸಿದೆ.

ಮೃತ ಭೂಮಾನಂದ ಕುಟುಂಬಕ್ಕೆ ಸರಕಾರದಿಂದ ಎಲ್ಲಾ ರೀತಿಯ ನೆರವು ಒದಗಿಸಲು ಕ್ರಮ

ಈ ವೇಳೆ ನಿಗಮದ ಅಧ್ಯಕ್ಷರಾದ ಜಿ. ಎಸ್. ಮಂಜುನಾಥ ಅವರು ಮಾತನಾಡಿ, ಕೊಲೆಯಾದ ಸಂತ್ರಸ್ತ ವ್ಯಕ್ತಿಯ ಕುಟುಂಬಕ್ಕೆ ಹಾಗೂ ಅವರ ಮೇಲೆ ಅವಲಂಬಿತರಾಗಿರುವ ಕುಟುಂಬದ ಎಲ್ಲರಿಗೂ ಸರ್ಕಾರದಿಂದ ಮತ್ತು ನಿಗಮದಿಂದ ಸಿಗಬೇಕಾದ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಲಾಗಿದೆ ಎಂದರು.

ಸಂತ್ರಸ್ತ ಕುಟುಂಬದವರು ಸಲ್ಲಿಸಿರುವ ಮನವಿಯಂತೆ ಅವರಿಗೆ ಅಗತ್ಯವಿರುವ ಎಲ್ಲಾ ನೆರವು ನೀಡಲು ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಸಂತ್ರಸ್ತರ ಮೂವರು ಹೆಣ್ಣುಮಕ್ಕಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು, ಅವರನ್ನು ವಸತಿ ಶಾಲೆಗಳಲ್ಲಿ ಸೇರಿಸಿ ಪಿಯುಸಿ ವರೆಗೆ ಸಂಪೂರ್ಣ ಉಚಿತ ಶಿಕ್ಷಣವನ್ನು ನೀಡಲು ನಿಗಮದ ವತಿಯಿಂದ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಸಂತ್ರಸ್ತರ ಹೆಂಡತಿಯ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ಜಮೀನು ನೀಡಲು ವ್ಯವಸ್ಥೆ ಮಾಡಲಾಗುವುದು. ಹಾಗೆಯೇ ಕಾರು ಮತ್ತು ಹಾಲೋ ಬ್ಲಾಕ್ಸ್ ಫ್ಯಾಕ್ಟರಿಗೆ ಬೆಂಬಲ ಕೋರಿ ಸಲ್ಲಿಸಿರುವ ಅರ್ಜಿಗೂ ಸೌಲಭ್ಯ ಕಲ್ಪಿಸಲಾಗುವುದು. ಸಂತ್ರಸ್ತರ ನಾಲ್ಕು ಜನ ಸಹೋದರರ ಆರ್ಥಿಕ ಸ್ಥಿತಿಯನ್ನು ಗಮನಿಸಿದ್ದು ಅವರಿಗೆ ನಿಗಮದಿಂದ ತಲಾ ಒಬ್ಬರಂತೆ ಎಲ್ಲರಿಗೂ ಆರ್ಥಿಕ ನೆರವು ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಂತ್ರಸ್ತ ಕುಟುಂಬಕ್ಕೆ ಲಿಡ್ಕರ್ ಸಂಸ್ಥೆಯ ವತಿಯಿಂದ ಮನೆ ಒದಗಿಸಲು ನಿರ್ಧರಿಸಲಾಗಿದ್ದು, ಈ ಕುರಿತು ಅಧ್ಯಕ್ಷರೊಂದಿಗೆ ಮಾತುಕತೆ ನಡೆಸಲಾಗಿದೆ. ಸಂಪೂರ್ಣ ವರದಿ ತರಿಸಿಕೊಂಡು ಶೀಘ್ರವೇ ಮನೆ ಮಂಜೂರು ಮಾಡಲಾಗುವುದು. ಸಂತ್ರಸ್ತರ ಕುಟುಂಬಕ್ಕೆ ಸೂಕ್ತ ನ್ಯಾಯ ದೊರಕಿಸಿಕೊಡುವ ಭರವಸೆಯನ್ನು ನೀಡಲಾಗಿದ್ದು, ಮಕ್ಕಳನ್ನು ಚೆನ್ನಾಗಿ ಓದಿಸಿ ಉನ್ನತ ಅಧಿಕಾರಿಗಳನ್ನಾಗಿ ಮಾಡಬೇಕೆಂದು ಕುಟುಂಬದ ಮುಖ್ಯಸ್ಥರಿಗೆ ಹೇಳಿದರು.

ಕರಡಕಲ್ ಗ್ರಾಮಕ್ಕೆ ಭೇಟಿ: ಹದ್ದಿನಾಳ ಗ್ರಾಮದಿಂದ ದೇವದುರ್ಗ, ಜಾಲಹಳ್ಳಿ ಮಾರ್ಗವಾಗಿ ನೇರವಾಗಿ ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮಕ್ಕೆ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ ಅವರು ಭೇಟಿ ನೀಡಿ, ಮೃತ ರಾಣಿಮ್ಮ ಎಂಬುವವರ ಅಪಹರಣ ಹಾಗೂ ಕೊಲೆ ಹಿನ್ನಲೆಯಲ್ಲಿ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಂಜುನಾಥ, ಜಿಲ್ಲಾ ವ್ಯವಸ್ಥಾಪಕ ರಾಜೇಂದ್ರ ಜಲ್ದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಕುಟುಂಬದ ಸದಸ್ಯರು ಹಾಗೂ ಸಂಘಟನೆಯ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಕಾಂಗ್ರೆಸ್ ಕೋಟೆಗೆ ಬೆಂಕಿ ಬಿದ್ದರೂ ಕುಂಭಕರ್ಣ ನಿದ್ದೆಯಲ್ಲಿ ಸಿರವಾರ ನಾಯಕರು:

ಇ.ಡಿ. ದಾಳಿ ಖಂಡಿಸಿ ಮೇಷಕ್ ದೊಡ್ಮನೆ ತೀವ್ರ ಆಕ್ರೋಶ

■ ಶ್ರಮಿಕ ವರ್ಗ ಸುದ್ದಿ :



ಸಿರವಾರ,ಸೆ.10- ಕಾಂಗ್ರೆಸ್ ಕೋಟೆಗೆ ಬೆಂಕಿ ಬಿದ್ದರೂ ಏನೂ ಆಗಿಯೇ ಇಲ್ಲ ಎನ್ನುವಂತೆ ಸಿರವಾರ ತಾಲೂಕಿನ ಕಾಂಗ್ರೆಸ್ ಪಕ್ಷದ ನಾಯಕರು ಕುಂಭಕರ್ಣ ನಿದ್ದೆಯಲ್ಲಿದ್ದಾರೆ ಎಂದು ಎಂ.ಬಿ.ವಿ ಸಂಚಾಲಕ ಮೇಷಕ್ ದೊಡ್ಮನೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುಂದಿನ ದಿನಗಳಲ್ಲಿ ಬಿಜೆಪಿಯನ್ನು ಶತಾಯ ಗತಾಯವಾಗಿ ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕೆಂಬ ದುರುದ್ದೇಶವಿಟ್ಟುಕೊಂಡು ವಿರೋಧ ಪಕ್ಷದ ನಾಯಕರ ಮೇಲೆ ಲೋಕಾಯುಕ್ತ ಹಾಗೂ ಇಡಿ ಯಂತಹ ಕೇಂದ್ರೀಯ ತನಿಖಾ ಸಂಸ್ಥೆಗಳನ್ನು ಪ್ರಚೋದಿಸಿ, ಅವರ ಜನಪ್ರಿಯತೆಗೆ ಧಕ್ಕೆ ತರುವ ಕೆಲಸವನ್ನು ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದಲೂ ಮಾಡುತ್ತಾ ಬಂದಿದೆ. ನಮ್ಮ ಅಹಿಂದ ವರ್ಗದ ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಎಲ್ಲಾ ಸಾಮಾಜಿಕ ಚಿಂತನೆ-ವಿಚಾರಗಳೊಂದಿಗೆ ಸಮಾಜದಲ್ಲಿ ಸತ್ಯದ ಪ್ರತಿಪಾದನೆಯೊಂದಿಗೆ ತಮ್ಮದೇ ಆದ ವರ್ಚಸ್ಸು ಸೃಷ್ಟಿಸಿಕೊಂಡಿರುವ, ದಲಿತ ಹಾಗೂ ಹಿಂದುಳಿದ ವರ್ಗಗಳ ಆಶಾಕಿರಣ, ಕರ್ನಾಟಕದ ಮುಂದಿನ ಮುಖ್ಯಮಂತ್ರಿ ಎಂದೇ ಬಿಂಬಿತವಾಗಿರುವ ಪ್ರಬಲ ನಾಯಕ ಸನ್ಮಾನ್ಯ ಸತೀಶ್ ಜಾರಕಿಹೊಳಿಯವರನ್ನು ರಾಜಕೀಯವಾಗಿ ಹಿನ್ನೆಲೆಗೆ ಸರಿಸುವ ಯೋಜನೆಯನ್ನು ಬಿಜೆಪಿ ರೂಪಿಸಿದೆ.

ಕೋಮುವಾದಿ ಹಾಗೂ ಅಹಿಂದ, ದಲಿತ ವಿರೋಧಿ ಬಿಜೆಪಿ ಇಂತಹ ಇಡಿ ದಾಳಿ ನಡೆಸಿದ್ದನ್ನು ಒಕ್ಕೊರಲಿನಿಂದ ಕರ್ನಾಟಕದ ಎಲ್ಲಾ ಸಮಾಜದ ಬಂಧುಗಳು ಖಂಡಿಸಿರುವುದು ಅತ್ಯಂತ ಸಂತೋಷದಾಯಕ ಸಂಗತಿಯಾಗಿದೆ. ಬಿಜೆಪಿ ಇದೇ ರೀತಿಯಾಗಿ ಅದೆಷ್ಟೋ ನಾಯಕರನ್ನು ಕೇಂದ್ರದ ತನಿಖಾ ತಂಡಗಳನ್ನು ಮುಂದು ಮಾಡಿ ದಾಳಿಗೊಳಪಡಿಸಿ, ನಂತರ ಆ ನಾಯಕರನ್ನು ತಮ್ಮ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಬಿಜೆಪಿಯ 'ವಾಷಿಂಗ್ ಮಷಿನ್' ಮೂಲಕ ಕ್ಲೀನ್ ಚಿಟ್ ಕೊಟ್ಟಿದ್ದನ್ನು ದೇಶದ ಜನತೆ ಇಂದಿಗೂ ಮರೆತಿಲ್ಲ. ಹೀಗಾಗಿ ಬಿಜೆಪಿ ಇಂತಹ ರಣಹೇಡಿ ಹಾಗೂ ಕೆಳಮಟ್ಟದ ಆಲೋಚನೆಯನ್ನು ಬಿಟ್ಟು, ಕೇವಲ ವಿರೋಧ ಪಕ್ಷಗಳ ಮುಖಂಡರನ್ನೇ ಗುರಿಯಾಗಿಸುವುದನ್ನು ನಿಲ್ಲಿಸಬೇಕು. ಇಡಿ ಸಂಸ್ಥೆಯನ್ನು ತಮ್ಮ ಕೈಗೊಂಬೆಯಾಗಿಸದೆ ನಿಷ್ಪಕ್ಷಪಾತವಾಗಿ, ಸ್ವತಂತ್ರವಾಗಿ ಕೆಲಸ ಮಾಡಲು ಬಿಡಬೇಕು. 2ಜಿ ಸ್ಪೆಕ್ಟ್ರಂನಂತಹ ಸುಳ್ಳು ಆರೋಪಗಳನ್ನು ಸೃಷ್ಟಿಸಿ ಬಿಜೆಪಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಿದೆ. ಬಿಜೆಪಿಯ ಆಡಳಿತದಲ್ಲಿ ಸಾಲು ಸಾಲು ಭ್ರಷ್ಟಾಚಾರಗಳು ನಡೆದಿದ್ದರೂ, ಇಡಿ ಮಾತ್ರ ಆಡಳಿತ ಪಕ್ಷದವರ ಮೇಲೆ ದಾಳಿ ಮಾಡದೆ ಕೇವಲ ವಿರೋಧ ಪಕ್ಷಗಳ ನಾಯಕರನ್ನೇ ಗುರಿಯಾಗಿಸುತ್ತಿರುವುದು ದೇಶದಲ್ಲಿ ಅರಾಜಕತೆ ಸೃಷ್ಟಿಯಾಗಿರುವುದಕ್ಕೆ ಸ್ಪಷ್ಟ ನಿದರ್ಶನವಾಗಿದೆ. ಚುನಾವಣಾ ಅಕ್ರಮಗಳು ದೊಡ್ಡಮಟ್ಟದಲ್ಲಿ ನಡೆದಿದ್ದರೂ ಇಂತಹ ಯಾವುದೇ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸದಿರುವುದು ಹಾಗೂ ದೇಶದಲ್ಲಿ ರೂಪಾಯಿ ಮೌಲ್ಯ ಪಾತಾಳಕ್ಕೆ ಕುಸಿದಿರುವುದು, ಉದ್ಯೋಗ ಕೇಳುವ ಯುವಕರ ಕೈಗಳಿಗೆ ಲಾಠಿ ಬೀಸಿ ಧ್ವನಿಯನ್ನು ಹತೋಟಿ ಮಾಡುವುದು ಬಿಜೆಪಿಯ ಅಧಃಪತನಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಅನ್ಯ ಪಕ್ಷಗಳ ನಾಯಕರ ಮೇಲೆ ಇಡಿ ಯಂತಹ ಸಂಸ್ಥೆಗಳಿಂದ ಸುಳ್ಳು ಸೃಷ್ಟಿಸಿ ಜನರನ್ನು ವಂಚಿಸುವ ಕೆಲಸವನ್ನು ಬಿಜೆಪಿ ಕೂಡಲೇ ಕೈಬಿಡಬೇಕು.

ಇಂತಹ ನೂರು ಇಡಿ ದಾಳಿಗಳು ನಡೆದರೂ ಸತೀಶ್ ಜಾರಕಿಹೊಳಿ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶ ಎಂದಿಗೂ ಈಡೇರುವುದಿಲ್ಲ. ಸಾಹುಕಾರರು ನಡೆಸಿರುವ ಅನಾಥ ಆಶ್ರಮಗಳು, ಬಡ ವಿದ್ಯಾರ್ಥಿಗಳಿಗೆ ಉಚಿತ ಸ್ಪರ್ಧಾತ್ಮಕ ತರಬೇತಿ ಕೇಂದ್ರಗಳು ಮತ್ತು ಉದ್ಯೋಗ ಸೃಷ್ಟಿಯಂತಹ ನಿಷ್ಪಕ್ಷಪಾತ ಸೇವಾ ಕಾರ್ಯಗಳ ಮುಂದೆ ಬಿಜೆಪಿಯ ಕುತಂತ್ರ ಎಂದಿಗೂ ಸಫಲಗೊಳ್ಳುವುದಿಲ್ಲ. ಬದಲಾಗಿ ಸಾಹುಕಾರರ ಪ್ರಭಾವ ಮತ್ತಷ್ಟು ಹೆಚ್ಚಾಗಲಿದೆ. ಬಿಜೆಪಿಯವರು ಇನ್ನು ಮುಂದಾದರೂ ತಮ್ಮ ತಟ್ಟೆಯಲ್ಲಿ ಏನಿದೆ ಎಂಬುದನ್ನು ನೋಡಿಕೊಳ್ಳಲಿ ಎಂದು ಅವರು ಎಚ್ಚರಿಸಿದ್ದಾರೆ.

ಮೊದಲನೇ ಪುಟದಿಂದ......

ಗೆಲುವು ನಮ್ಮದೇ:ವಿಜಯೇಂದ್ರ

ಮುಂದಿನ ಒಂದೂವರೆ ವರ್ಷಗಳ ಕಾಲ ಇದು ಮುಂದುವರಿಯಲಿದೆ ಎಂದು ಹೇಳಿದರು.

ಇಂದು ಸಂಜೆ ನಾಲ್ಕು ಗಂಟೆಗೆ ಮುನ್ಸಿಪಲ್ ಮೈದಾನದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ. ಇದಕ್ಕೆ ಭಾರಿ ಸಂಖ್ಯೆಯಲ್ಲಿ ಜನರು ಸೇರಲಿದ್ದಾರೆ. ಇಲ್ಲಿಗೆ ಮೊದಲ ಹಂತರ ಹೋರಾಟ ಮುಕ್ತಾಯವಾಗಲಿದೆ ಎಂದರು.

ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಜನ ಈಗಾಗಲೇ ದಿಕ್ಕರಿಸುವ ಮನಸ್ಥಿತಿಗೆ ಬಂದಿದ್ದಾರೆ. ಈ ಸರ್ಕಾರದಿಂದ ಯಾವುದೇ ಪ್ರಯೋಜನ ಇಲ್ಲ ಎಂಬುದು ಅವರಿಗೆ ಮನವರಿಕೆಯಾಗಿದೆ. ನಾಡಿನ ಬಡವರು, ದೀನದಲಿತರು, ಮಹಿಳೆಯರು, ಕೂಲಿ ಕಾರ್ಮಿಕರಿಗೆ ಯಾವುದೇ ಅನುಕೂಲವನ್ನು ಈ ಸರ್ಕಾರ ಮಾಡಿಲ್ಲ. ನಾನು ಶೇ 90 ಉದ್ಯಮ, ಶೇ 10 ರಷ್ಟು ರಾಜಕಾರಣಿ ಎಂದು ಸಿಎಂ ಹೇಳಿದ್ದಾರೆ. ಅವರ ಮಾತಲ್ಲೇ ಎಲ್ಲ ಅಡಗಿದೆ. ಡಿ.ಕೆ.ಶಿವಕುಮಾರ್ ಅವರಿಗೆ ರಿಯಲ್ ಎಸ್ಟೇಟ್ ವ್ಯವಹಾರ ಮುಖ್ಯವಾಗಿದೆ. ಇಂತಹವರಿಂದ ರಾಜ್ಯದ ಅಭಿವೃದ್ಧಿ ನಿರೀಕ್ಷಿಸಲು ಸಾಧ್ಯವಿಲ್ಲ. ವಿಶೇಷವಾಗಿ ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳಿಗೆ ಈ ಸರ್ಕಾರ ಉತ್ತರ ನೀಡಿಲ್ಲ ಎಂದರು.

ನೂರು ದಿನಗಳ ಸಾಧನೆ ಶೂನ್ಯ: ಸರ್ಕಾರ ನೂರು ದಿನ ಪೂರೈಸಿದ್ದಕ್ಕೆ ಸಮಾವೇಶ ಮಾಡ್ತಾ ಇದ್ದಾರೆ. ಈ ಸರ್ಕಾರದ ಸಾಧನೆ ಶೂನ್ಯ. ಜನರೇ ಇದನ್ನು ಮನೆಮನೆಯಲ್ಲಿ ಹೇಳುತ್ತಿದ್ದಾರೆ. ಇವರದು ಜನಪ್ರಿಯ ಸರ್ಕಾರ ಅಲ್ಲ. ಜಾಹೀರಾತು ಸರ್ಕಾರ ಎಂದು ಟೀಕಿಸಿದರು.

ಯಾವುದೇ ಜನಪರ ಕಾರ್ಯಕ್ರಮ ಕೊಟ್ಟಿಲ್ಲ. ಬಡವರ, ದೀನದಲಿತ ಶೋಷಣೆ ನಿಂತಿಲ್ಲ. ಯುವಕರಿಗೆ ಉದ್ಯೋಗ ನೀಡಿಲ್ಲ. ನುಡಿದಂತೆ ನಡೆಯುತ್ತಿದ್ದೇವೆ ಎಂದು ತಮ್ಮ ಬೆನ್ನನ್ನು ತಾವೇ ತಟ್ಟಿಕೊಂಡು ಶಹಬ್ಬಾಸ್ ಹೇಳಿಕೊಳ್ಳುತ್ತಿದ್ದಾರೆ. ಜಾಹೀರಾತು ನೀಡಿದರೆ ಜನರನ್ನು ತಲುಪಬಹುದು ಎಂಬ ಭ್ರಮೆಯಲ್ಲಿ ಈ ಸರ್ಕಾರ ಇದೆ. ಇದಕ್ಕೆಲ್ಲ ಜನರೇ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡಲಿದ್ದಾರೆ, ಪಾಠ ಕಲಿಸಲಿದ್ದಾರೆ ಎಂದು ವಿಜಯೇಂದ್ರ ಹೇಳಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಪಾದಯಾತ್ರೆಯ ಪಾವಿತ್ರ್ಯತೆಯನ್ನು ಬಿಜೆಪಿ ಮುಖಂಡರು ಮಣ್ಣುಗೂಡಿಸಿದರೇ?

ದೇಶದಲ್ಲಿ ಇಲ್ಲಿಯವರೆಗೆ ಜರುಗಿದ ಪಾದಯಾತ್ರೆಗಳು ಜನರ ಸಮಸ್ಯೆಗಳನ್ನು ಹೊತ್ತು ನಡೆದ ಹೆಜ್ಜೆಗಳಾಗಿದ್ದವು, ರಾಜಕೀಯ ಇತಿಹಾಸದಲ್ಲಿ ದಾಖಲಾಗಿದ್ದವು. ಬಿಜೆಪಿಯ ಮೂವರು ಮುಖಂಡರ ನೇತೃತ್ವದಲ್ಲಿ ನಡೆದ ಪಾದಯಾತ್ರೆ, ಆ ನಾಯಕರ ಮೆರವಣಿಗೆ ಮತ್ತು ಮೆರೆದಾಟಕ್ಕೆ ಮಾತ್ರ ಸೀಮಿತವಾಗಿತ್ತು. ಜನರ ನಂಬಿಕೆಯನ್ನು ಹುಸಿಗೊಳಿಸಿತ್ತು. ಪಾದಯಾತ್ರೆಯ ಪಾವಿತ್ರ್ಯತೆಯನ್ನು ಮಣ್ಣುಗೂಡಿಸಿತ್ತು.

ಭಾರತದ ರಾಜಕಾರಣದಲ್ಲಿ ಪಾದಯಾತ್ರೆ ಕೇವಲ ಕಾಲ್ನಡಿಗೆಯ ಪ್ರಯಾಣವಲ್ಲ; ಜನರನ್ನು ನೇರವಾಗಿ ತಲುಪುವ, ಜನರನ್ನು ಜಾಗೃತಗೊಳಿಸುವ, ನಾಯಕತ್ವವನ್ನು ರೂಪಿಸುವ ಮತ್ತು ಕೆಲವೊಮ್ಮೆ ಚುನಾವಣಾ ರಾಜಕಾರಣದ ದಿಕ್ಕನ್ನೇ ಬದಲಿಸುವ ಸಾಧನವಾಗಿದೆ. ಮಹಾತ್ಮ ಗಾಂಧಿಯವರ ದಂಡಿ ಯಾತ್ರೆಯಿಂದ ಆರಂಭಿಸಿ, ಮಾಜಿ ಪ್ರಧಾನಿ ಚಂದ್ರಶೇಖರ್, ಬಿಜೆಪಿಯ ಹಿರಿಯ ನಾಯಕ ಅಡ್ವಾಣಿ, ಆಂಧ್ರದ ಕಾಂಗ್ರೆಸ್ ನಾಯಕ ವೈ.ಎಸ್. ರಾಜಶೇಖರ ರೆಡ್ಡಿ, ಪಶ್ಚಿಮ ಬಂಗಾಳದ ಮಮತಾ ಬ್ಯಾನರ್ಜಿ, ಕರ್ನಾಟಕದ ಸಿದ್ದರಾಮಯ್ಯ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆವರೆಗೆ ಪಾದಯಾತ್ರೆಗಳು ದೇಶದ ಇತಿಹಾಸದ ಭಾಗವಾಗಿವೆ.

ಅಂತಹ ಐತಿಹಾಸಿಕ ಪಾದಯಾತ್ರೆಗಳನ್ನು ಕಂಡ ಜನ ಸಹಜವಾಗಿಯೇ, ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆಯ ಬಗ್ಗೆ ಆಶಾಭಾವನೆ ಹೊಂದಿದ್ದರು. ರಾಜಕೀಯ ಪಕ್ಷವೊಂದು ಜನರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬೀದಿಗಿಳಿಯುವುದು ಪ್ರಜಾಪ್ರಭುತ್ವದ ಆರೋಗ್ಯಕರ ಲಕ್ಷಣ ಎಂದು ತಿಳಿದಿದ್ದರು. ಅಧಿಕಾರದಲ್ಲಿರುವ ಪಕ್ಷವನ್ನು ಪ್ರಶ್ನಿಸುವುದು, ಆಡಳಿತದ ವೈಫಲ್ಯಗಳನ್ನು ಜನರ ಮುಂದೆ ಇಡುವುದು ಮತ್ತು ಜನರ ಪರವಾಗಿ ಧ್ವನಿ ಎತ್ತುವುದು ವಿರೋಧ ಪಕ್ಷದ ಮೂಲಭೂತ ಕರ್ತವ್ಯ ಎಂದು ಭಾವಿಸಿದ್ದರು.

ಆ ನಿಟ್ಟಿನಲ್ಲಿ ವಿರೋಧ ಪಕ್ಷವಾದ ಬಿಜೆಪಿ ಕೂಡ ಹಿಂದೆ ಬಿದ್ದಿಲ್ಲ. ರಾಜ್ಯ ಸರ್ಕಾರದ ಭಾಗವಾಗಿದ್ದ ಸಚಿವರೊಬ್ಬರು ಆರೋಪಿಯಾಗಿರುವ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ, ರೈತರ ಸಮಸ್ಯೆ, ಬರ ನಿರ್ವಹಣೆ ಮತ್ತು ಆಡಳಿತ ವೈಫಲ್ಯಗಳನ್ನು ಪಾದಯಾತ್ರೆಯುದ್ದಕ್ಕೂ ಪ್ರಮುಖವಾಗಿ ಪ್ರಶ್ನಿಸಲಾಗಿದೆ. ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವ ಪ್ರಯತ್ನವನ್ನೂ ಮಾಡಿದೆ.

ಆದರೆ, ಬಿಜೆಪಿ ಹಮ್ಮಿಕೊಂಡಿದ್ದ ಪಾದಯಾತ್ರೆ ಕೇವಲ ಮೂರು ಜಿಲ್ಲೆಗಳಿಗೆ- ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿಗಷ್ಟೇ ಸೀಮಿತವಾಗಿತ್ತು. ಹಾಗೆಯೇ ಮೂವರು ನಾಯಕರು- ವಿಜಯೇಂದ್ರ, ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲುಗಳ ಮೆರವಣಿಗೆಯಾಗಿತ್ತು ಎನ್ನುವ ಅಪವಾದವೂ ಅಂಟಿಕೊಂಡಿದೆ.

ಅದಕ್ಕೆ ಪೂರಕವಾಗಿ ಈ ಮೂವರು ನಾಯಕರ ಮೆರವಣಿಗೆ ಮತ್ತು ಮೆರೆದಾಟ ಎಂತಹ ಅತಿರೇಕಕ್ಕೆ ಹೋಗಿತ್ತು ಮತ್ತು ಅದು ಜನರಲ್ಲಿ ಯಾವ ಪರಿ ಅಸಹ್ಯ ಹುಟ್ಟಿಸಿತ್ತು ಎನ್ನುವುದನ್ನು ಪಾದಯಾತ್ರೆಯನ್ನು ಖುದ್ದಾಗಿ ಕಂಡವರು ಹೇಳುತ್ತಿದ್ದಾರೆ. ಬಿಜೆಪಿಯವರಿಗೆ ಮೋದಿಯೇ ಮುಖ್ಯ, ಬಿಜೆಪಿಯ ಮುಖವೇ ಮೋದಿ. ಆದರೆ, ಪಾದಯಾತ್ರೆಯುದ್ದಕ್ಕೂ ಮೋದಿಯವರ ಒಂದೇ ಒಂದು ಫೋಟೋ, ಕಟೌಟ್ ಕೂಡ ಕಾಣಲಿಲ್ಲ. ಅದನ್ನು ಗಮನಿಸಿದ ಸಂಘಪರಿವಾರ ಪೋಷಿತ ಪತ್ರಿಕೆಯೊಂದು ಮೋದಿಯನ್ನು ಮರೆತ ವಿಜಯೇಂದ್ರ ಎಂದು ವಿಡಿಯೋ ಮಾಡಿತು. ಅದು ಪ್ರಸಾರವೂ ಆಯಿತು. ಅದನ್ನು ನೋಡಿ ಕೆಂಡಾಮಂಡಲರಾದ ವಿಜಯೇಂದ್ರ, ಸಂಘಪರಿವಾರದ ಪತ್ರಿಕೆಯ ಪತ್ರಕರ್ತನಿಗೇ ನೇರವಾಗಿ ಫೋನಾಯಿಸಿ, ಧಮ್ಕಿ ಹಾಕಿ, ಯೂಟ್ಯೂಬ್ ನಿಂದ ಆ ವಿಡಿಯೋ ಡಿಲೀಟ್ ಮಾಡಿಸಿದ್ದರು.

ಇದನ್ನೆಲ್ಲ ಗಮನಿಸಿದ ಬಿಜೆಪಿ ಮುಖಂಡ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಪಾದಯಾತ್ರೆ ಆರಂಭವಾಗುವ ಮುನ್ನವೇ ಮಾಯವಾಗಿದ್ದರು. ಇನ್ನು ರಾಜ್ಯದಲ್ಲಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿರುವ ಜೆಡಿಎಸ್, ಪಾದಯಾತ್ರೆಗೂ ನಮಗೂ ಸಂಬಂಧವಿಲ್ಲ ಎಂದು ಹೇಳಿ, ಪಾದಯಾತ್ರೆಯಿಂದ ಹೊರಗುಳಿದಿತ್ತು.

ಇವರೆಲ್ಲರನ್ನೂ ಬಿಟ್ಟು ಅದು ಭಾರತೀಯ ಜನತಾ ಪಕ್ಷದ ಪಾದಯಾತ್ರೆಯಾಗುವುದಾದರೂ ಹೇಗೆ? ಬಿಟ್ಟರೂ ಪರವಾಗಿಲ್ಲ, ಪಾದಯಾತ್ರೆಯ ನೇತೃತ್ವ ವಹಿಸಿದ್ದ ವಿಜಯೇಂದ್ರ, ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು- ಇವರಾದರೂ ಪಾದಯಾತ್ರೆಯ ಉದ್ದೇಶ ಈಡೇರಿಸಿದರೇ? ಈ ಪ್ರಶ್ನೆಗಳು ಪ್ರಶ್ನೆಗಳಾಗಿಯೇ ಉಳಿದಿವೆ. ಒಬ್ಬರು ಅಪ್ಪನ ಆಡಳಿತದಲ್ಲಿ ಡಿಫಾಕ್ಟೋ ಸಿಎಂ ಆಗಿ ಆಡಳಿತವನ್ನು ಅಧ್ವಾನ ಮಾಡಿದವರು; ಮತ್ತೊಬ್ಬರು ಶಾಸಕರನ್ನು ಖರೀದಿಸಿ ಸರ್ಕಾರ ರಚನೆಗೆ ನೆರವಾದ ಗಣಿ ಲೂಟಿಕೋರರು; ಮಗದೊಬ್ಬರು ಕೋವಿಡ್ ಹಗರಣದಲ್ಲಿ ಭಾಗಿಯಾದವರು. ಸಾರ್ವಜನಿಕ ವಲಯದಲ್ಲಿ ಕಳಂಕಿತ ವ್ಯಕ್ತಿಗಳು ಎಂದು ಹೆಸರಾದವರು.

ಕಳಂಕಿತ ವ್ಯಕ್ತಿಗಳು ಪಾದಯಾತ್ರೆ ಮಾಡಬಾರದು ಎಂಬ ನಿಯಮವೇನೂ ಇಲ್ಲ. ಪಾದಯಾತ್ರೆಯ ನೆಪದಲ್ಲಾದರೂ ಜನರೊಂದಿಗೆ ಬೆರೆತರೆ, ಕಷ್ಟಸುಖ ಕೇಳಿದರೆ ಎಂದರೆ- ಮೂವರೂ ಸಕಲ ಸೌಕರ್ಯವಿರುವ ಮೂರು ಅತ್ಯಾಧುನಿಕ ಕ್ಯಾರವಾನ್ ಗಳನ್ನು ಹೊಂದಿದ್ದರು. ಪಾದಯಾತ್ರೆಯುದ್ದಕ್ಕೂ ನೂರಾರು ವಾಹನಗಳು, ಜೈಕಾರ ಹಾಕುವ ಸಾವಿರಾರು ಕಾರ್ಯಕರ್ತರು, ಸ್ವಾಗತಿಸಲು ಆಳೆತ್ತರದ ಹಣ್ಣಿನ-ಹೂವಿನ ಹಾರಗಳು, ಆರತಿ ಎತ್ತುವ ಹೆಂಗಳೆಯರು, ನಗಾರಿ ಬಾರಿಸುವ ತಂಡದವರು ಸಿದ್ಧವಾಗಿದ್ದರು. ಅದನ್ನೆಲ್ಲ ವ್ಯವಸ್ಥೆ ಮಾಡಲು ಹರೀಶ್ ಪೂಂಜ ಮತ್ತು ಮಾನಪ್ಪ ವಜ್ಜಲ ಎಂಬ ಶಾಸಕರು ಉಸ್ತುವಾರಿ ಹೊತ್ತಿದ್ದರು.

ಇನ್ನು ಪಾದಯಾತ್ರೆಯನ್ನು ಇಡೀ ದೇಶಕ್ಕೆ ತಲುಪಿಸುವ ಸುದ್ದಿ ಮಾಧ್ಯಮಗಳು. ಇದಂತೂ ಹೊಸ ವಿವಾದವನ್ನೇ ಸೃಷ್ಟಿಸಿತು. ಪ್ರತಿ ಊರಲ್ಲೂ ಪಾದಯಾತ್ರೆಯನ್ನು ಎದುರುಗೊಳ್ಳುವ ನೂರಾರು ಪತ್ರಕರ್ತರು ಮತ್ತು ಛಾಯಾಗ್ರಾಹಕರು. ಅವರ ಮುಂದೆ ಅತ್ಯುತ್ಸಾಹದಿಂದ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯುವ ಮುಖಂಡರು. ಆ ಸುದ್ದಿಗಳನ್ನು ಪ್ರಸಾರ ಮಾಡಿ ಪ್ರಚಾರ ನೀಡುವ ಮಾರಿಕೊಂಡ ಮಾಧ್ಯಮಗಳು; ಮಾಡದಿದ್ದರೆ ಇಡೀ ಪುಟವನ್ನೇ ಖರೀದಿಸಿ, ತಮಗೆ ಬೇಕಾದಂತೆ ಬರೆಸಿ ಜಾಹೀರಾತಿನ ಮೂಲಕ ಸುದ್ದಿ ಹಂಚುವ ಹೊಸ ವಿಧಾನಗಳು ಚಾಲ್ತಿಗೆ ಬಂದವು. ಇನ್ನು ಬಿಜೆಪಿ ಐಟಿ ಸೆಲ್ ಅಂತೂ, ಪಾದಯಾತ್ರೆಯನ್ನು ಸೋಷಿಯಲ್ ಮೀಡಿಯಾಗಳಲ್ಲಿ ಮೆರವಣಿಗೆ ಮಾಡಿತ್ತು.

ಇದನ್ನು ಕಂಡ ಸಚಿವ ಶಿವರಾಜ್ ತಂಗಡಗಿ, ರಾಜ್ಯ ಬಿಜೆಪಿ ನಾಯಕರು ಹಮ್ಮಿಕೊಂಡಿರುವ ಬಳ್ಳಾರಿ ಚಲೋ ಪಾದಯಾತ್ರೆಯನ್ನು ಬಿಜೆಪಿಯ ಪ್ರಾಯಶ್ಚಿತ್ತ ಯಾತ್ರೆ ಎಂದು ವ್ಯಂಗ್ಯವಾಡಿದರು. ವಿಜಯೇಂದ್ರ, ರೆಡ್ಡಿ ಮತ್ತು ರಾಮುಲು- ಮೂವರು ನಾಯಕರೂ ಈ ಹಿಂದೆ- ಕೆಜೆಪಿ, ಕಲ್ಯಾಣರಾಜ್ಯ ಪ್ರಗತಿ, ಬಿಎಸ್ಆರ್ ಪಕ್ಷಗಳನ್ನು ಕಟ್ಟಿ ಬಿಜೆಪಿಗೆ ದ್ರೋಹ ಬಗೆದವರು ಎಂದು ವ್ಯಂಗ್ಯವಾಡಿದರು. ಇನ್ನು ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ರಾಜ್ಯಾಧ್ಯಕ್ಷ ಸ್ಥಾನ ಕಳೆದುಕೊಳ್ಳುವ ಭೀತಿಯಿಂದ ಹಾಗೂ ಡಿಕೆಯೊಂದಿಗಿನ ಹೊಂದಾಣಿಕೆ ಮುಚ್ಚಿಹಾಕಲು ವಿಜಯೇಂದ್ರ ಈ ಪಾದಯಾತ್ರೆ ಹಮ್ಮಿಕೊಂಡಿದ್ದಾರೆ ಎಂದು ಆರೋಪಿಸಿದರು.

ರಾಜಕಾರಣಿಗಳ ಆರೋಪಗಳು, ಟೀಕೆಗಳನ್ನು ರಾಜಕಾರಣದ ಭಾಗವಾಗಿ ನೋಡಿ ನಿರ್ಲಕ್ಷಿಸಬಹುದು. ಆದರೆ, ಬಳ್ಳಾರಿ ಚಲೋ ಪಾದಯಾತ್ರೆಯ ಕೇಂದ್ರದಲ್ಲಿ ಸಾಮಾನ್ಯ ಜನರಿದ್ದರೇ, ಜನಪರ ಕಾಳಜಿಯಿತ್ತೇ ಎಂಬುದು ಇಂದಿಗೂ ಪ್ರಶ್ನೆಯಾಗಿಯೇ ಉಳಿದಿದೆ.

ಏಕೆಂದರೆ, ದೇಶದಲ್ಲಿ ಇಲ್ಲಿಯವರೆಗೆ ಜರುಗಿದ ಪಾದಯಾತ್ರೆಗಳು ಜನರ ಸಮಸ್ಯೆಗಳನ್ನು ಹೊತ್ತು ನಡೆದ ಹೆಜ್ಜೆಗಳಾಗಿದ್ದವು, ರಾಜಕೀಯ ಇತಿಹಾಸದಲ್ಲಿ ದಾಖಲಾಗಿದ್ದವು. ಬಿಜೆಪಿಯ ಮೂವರು ಮುಖಂಡರ ನೇತೃತ್ವದಲ್ಲಿ ನಡೆದ ಪಾದಯಾತ್ರೆ, ಆ ನಾಯಕರ ಮೆರವಣಿಗೆ ಮತ್ತು ಮೆರೆದಾಟಕ್ಕೆ ಮಾತ್ರ ಸೀಮಿತವಾಗಿತ್ತು. ಜನರ ನಂಬಿಕೆಯನ್ನು ಹುಸಿಗೊಳಿಸಿತ್ತು. ಪಾದಯಾತ್ರೆಯ ಪಾವಿತ್ರ್ಯತೆಯನ್ನು ಮಣ್ಣುಗೂಡಿಸಿತ್ತು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಶಿವಕುಮಾರ್ ಆಡಳಿತಕ್ಕೆ 100 ದಿನ: ವೇಗ, ಮಹತ್ವಾಕಾಂಕ್ಷೆ, ತಪ್ಪು ತಿದ್ದಿಕೊಂಡ ಜಾಣ್ಮೆ, ಯೋಜನೆಗಳ ಜಾರಿಯದ್ದೇ ಅಸಲಿ ಸವಾಲು


ಡಿ.ಕೆ. ಶಿವಕುಮಾರ್ ಸರ್ಕಾರದ ನೂರು ದಿನಗಳ ಆಡಳಿತವು ರಾಜಕೀಯವಾಗಿ ಕೆಲವು ಏರಿಳಿತಗಳನ್ನು ಕಂಡಿದ್ದರೂ, ತನ್ನ ತಪ್ಪುಗಳನ್ನು ಬೇಗನೆ ತಿದ್ದಿಕೊಳ್ಳುವ ಜಾಣ್ಮೆ ತೋರುವ ಮೂಲಕ ಭರವಸೆ ಮೂಡಿಸಿದೆ. ಆದರೆ, ನೂರು ದಿನಗಳ ಸಂಭ್ರಮದಲ್ಲಿ ಬಿಡುಗಡೆಯಾಗಿರುವ ಈ ಹತ್ತಾರು ಮಹತ್ವಾಕಾಂಕ್ಷಿ ಘೋಷಣೆಗಳು ಕೇವಲ ಕಾಗದದ ಮೇಲಿನ ಪ್ರಚಾರದ ಸರಕಾಗದೆ ವಾಸ್ತವದಲ್ಲಿ ಎಷ್ಟರಮಟ್ಟಿಗೆ ಅನುಷ್ಠಾನಗೊಳ್ಳುತ್ತವೆ ಎಂಬುದು ಅತಿಮುಖ್ಯ ಪ್ರಶ್ನೆಯಾಗಿದೆ. ಈ ಎಲ್ಲಾ ಬೃಹತ್ ಯೋಜನೆಗಳನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರಲು ಬೇಕಾದ ಆಡಳಿತಾತ್ಮಕ ಇಚ್ಛಾಶಕ್ತಿ ಹಾಗೂ ಅಪಾರ ಆರ್ಥಿಕ ಸಂಪನ್ಮೂಲವನ್ನು ಒದಗಿಸುವುದು ಸರ್ಕಾರದ ಮುಂದಿರುವ ಬಹುದೊಡ್ಡ ಸವಾಲಾಗಿದೆ. ಈ ಯೋಜನೆಗಳು ಕಟ್ಟಕಡೆಯ ಮನುಷ್ಯನಿಗೆ ತಲುಪಿದಾಗ ಮಾತ್ರ ಈ ನವೀನ ಸರ್ಕಾರದ ನೈಜ ಯಶಸ್ಸು ನಿರ್ಧಾರವಾಗಲಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸರ್ಕಾರ ಅಧಿಕಾರಕ್ಕೆ ಬಂದು ನೂರು ದಿನಗಳನ್ನು ಪೂರೈಸಿದ ಸಂದರ್ಭದಲ್ಲಿ, ಆಡಳಿತದ ಒಟ್ಟಾರೆ ವೇಗ ಹಾಗೂ ಅಭಿವೃದ್ಧಿಯ ಮಹತ್ವಾಕಾಂಕ್ಷೆಗಳು ಎದ್ದು ಕಾಣುತ್ತಿದ್ದವು. ದೃಢ ಕರ್ನಾಟಕದ ಸಂಕಲ್ಪ ಎಂಬ ಘೋಷವಾಕ್ಯದಡಿ ವಿಧಾನಸೌಧದಲ್ಲಿ ಆಯೋಜಿಸಲಾಗಿದ್ದ ನೂರು ದಿನಗಳ ಸಂಭ್ರಮದ ಕಾರ್ಯಕ್ರಮದಲ್ಲಿ, ಸರ್ಕಾರವು ಶಿಕ್ಷಣ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ವಲಯಗಳಿಗೆ ಸಂಬಂಧಿಸಿದಂತೆ ಭರಪೂರ ಹೊಸ ಯೋಜನೆಗಳನ್ನೂ ಘೋಷಿಸಿದೆ. ರಾಜಕೀಯವಾಗಿ ಪ್ರಾಥಮಿಕ ಹಂತದ ಯಶಸ್ಸು ಸಾಧಿಸಿರುವ ಸರ್ಕಾರ, ಇದೀಗ ಆಡಳಿತಾತ್ಮಕವಾಗಿ ದೊಡ್ಡ ಹೆಜ್ಜೆಗಳನ್ನಿಡಲು ಮುಂದಾಗಿದೆ. ಆದರೆ, ಕಾಗದದ ಮೇಲಿರುವ ಮತ್ತು ವೇದಿಕೆಯ ಮೇಲೆ ಘೋಷಣೆಯಾಗಿರುವ ಇಷ್ಟೊಂದು ಬೃಹತ್ ಯೋಜನೆಗಳು ವಾಸ್ತವಿಕ ನೆಲೆಯಲ್ಲಿ ಎಷ್ಟರಮಟ್ಟಿಗೆ ಜಾರಿಯಾಗುತ್ತವೆ ಎಂಬ ಪ್ರಶ್ನೆಯಂತೂ ಇದೆ.

ಈ ಸರ್ಕಾರದ ಆರಂಭಿಕ ಹಾದಿಯನ್ನು ಹಿಂತಿರುಗಿ ನೋಡಿದಾಗ, ಅತ್ಯಂತ ಪ್ರಮುಖವಾದ ಮತ್ತು ಸಕಾರಾತ್ಮಕ ಬೆಳವಣಿಗೆ ಎಂದರೆ ನೂತನ ಮುಖ್ಯಮಂತ್ರಿಯವರಿಗೆ ನಡೆದ ಅಧಿಕಾರ ಹಸ್ತಾಂತರ ಪ್ರಕ್ರಿಯೆ. ಸಾಮಾನ್ಯವಾಗಿ ನೂತನ ಸರ್ಕಾರ ರಚನೆಯಾದಾಗ, ಅದರಲ್ಲಿಯೂ ನಾಯಕತ್ವ ಬದಲಾವಣೆಯಾದಾಗ ಕಾಣಿಸಿಕೊಳ್ಳುವ ರಾಜಕೀಯ ಭಿನ್ನಮತಗಳು ಅಥವಾ ಬಹಿರಂಗ ಕಚ್ಚಾಟಗಳು ಇಲ್ಲಿ ಎಲ್ಲಿಯೂ ವ್ಯಕ್ತವಾಗಲಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತೋರಿದ ಅಪಾರ ರಾಜಕೀಯ ಪ್ರಬುದ್ಧತೆ ಹಾಗೂ ಸಹಕಾರದಿಂದಾಗಿ ಆಡಳಿತದ ಚುಕ್ಕಾಣಿ ಹಿಡಿಯುವ ಪ್ರಕ್ರಿಯೆ ಅತ್ಯಂತ ಸುಗಮವಾಗಿ ನೆರವೇರಿತು. ಅವರವರ ಮನಸ್ಸಿನಲ್ಲಿ ಯಾವ ಪ್ರಮಾಣದ ಅನುಮಾನ ಅಥವಾ ಸಿಟ್ಟು ಇದೆಯೋ ಹತ್ತಿರದಲ್ಲಿರಬಹುದಾದವರಿಗೆ ತಿಳಿದಿರುತ್ತದಾದರೂ, ಬಹಿರಂಗವಾಗಿ ಅಂಥದ್ದು ಕಂಡಿಲ್ಲ. ನೂರು ದಿನಗಳ ಸಾಧನೆಯ ಕಾರ್ಯಕ್ರಮವನ್ನು ಸ್ವತಃ ಸಿದ್ದರಾಮಯ್ಯನವರೇ ಉದ್ಘಾಟಿಸಿದ್ದು ಆಡಳಿತ ಪಕ್ಷದ ಒಳಗಿನ ಒಗ್ಗಟ್ಟಿಗೆ ಸಾಕ್ಷಿಯಾಗಿದೆ. ಮೂರು ವರ್ಷಗಳನ್ನು ಪೂರೈಸಿರುವ ಯಾವುದೇ ಸರ್ಕಾರದ ಮೇಲಾದರೂ ಬರುವ ಆಡಳಿತ ವಿರೋಧಿ ಅಲೆಯ ನಡುವೆಯೂ, ಜನರಲ್ಲಿ ಒಂದು ಫ್ರೆಶ್ ಗವರ್ನಮೆಂಟ್ (ನವೀನ ಸರ್ಕಾರ) ಎಂಬ ಭಾವನೆಯನ್ನು ಕಟ್ಟಿಕೊಡುವಲ್ಲಿ ಸರ್ಕಾರ ಯಶಸ್ವಿಯಾಗಿದೆ.

ಆದರೆ, ಈ ನೂರು ದಿನಗಳ ಆಡಳಿತದ ಹಾದಿ ಸಂಪೂರ್ಣವಾಗಿ ಸುಗಮವಾಗಿರಲಿಲ್ಲ. ಸರ್ಕಾರ ತೆಗೆದುಕೊಂಡ ಕೆಲವು ನಿರ್ಧಾರಗಳು ಸಾರ್ವಜನಿಕ ವಲಯದಲ್ಲಿ ತೀವ್ರ ವಿವಾದಕ್ಕೆ ಗುರಿಯಾಗಿ, ದೊಡ್ಡ ಮಟ್ಟದ ರಾಜಕೀಯ ಸಂಚಲನ ಮೂಡಿಸಿದವು. ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದ ಆರೋಪ ಹೊತ್ತಿದ್ದ ಶಾಸಕ ಬಿ. ನಾಗೇಂದ್ರ ಅವರನ್ನು ದಿಢೀರನೆ ಸಚಿವರನ್ನಾಗಿ ಸಂಪುಟಕ್ಕೆ ಮರು ಸೇರ್ಪಡೆ ಮಾಡಿಕೊಂಡಿದ್ದು ತೀವ್ರ ಟೀಕೆಗೆ ಗುರಿಯಾಯಿತು. ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಈ ವಿಚಾರವನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದವು. ಪರಿಸ್ಥಿತಿಯ ಗಂಭೀರತೆಯನ್ನು ಅರಿತ ಸರ್ಕಾರ, ತಕ್ಷಣವೇ ಎಚ್ಚೆತ್ತುಕೊಂಡು ಜನಾಭಿಪ್ರಾಯಕ್ಕೆ ಮಣಿಯಿತು. ಪರಿಣಾಮವಾಗಿ, ಸಚಿವರಾಗಿ ಅಧಿಕಾರ ವಹಿಸಿಕೊಂಡ ಕೇವಲ 25 ದಿನಗಳಲ್ಲಿಯೇ ಬಿ. ನಾಗೇಂದ್ರ ಅವರು ರಾಜೀನಾಮೆ ನೀಡಬೇಕಾಗಿ ಬಂತು. ತನ್ನ ತಪ್ಪನ್ನು ಬೇಗನೆ ತಿದ್ದಿಕೊಳ್ಳುವ ಮೂಲಕ, ವಿರೋಧ ಪಕ್ಷಗಳ ಅಸ್ತ್ರವನ್ನು ಸರ್ಕಾರ ಮೊಟಕುಗೊಳಿಸಿತು.

ಮೂಲಸೌಕರ್ಯ ಅಭಿವೃದ್ಧಿಯ ಹೆಸರಿನಲ್ಲಿ ಸರ್ಕಾರ ತೆಗೆದುಕೊಂಡ ಮತ್ತೊಂದು ನಿರ್ಧಾರ ಭಾರಿ ಜನಾಕ್ರೋಶಕ್ಕೆ ಕಾರಣವಾಯಿತು. ಹೆಬ್ಬಾಳದಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗೆ 17 ಕಿ.ಮೀ. ಉದ್ದದ ಸುರಂಗಮಾರ್ಗ (ಟನಲ್ ರೋಡ್) ನಿರ್ಮಾಣದ ಪ್ರಸ್ತಾವನೆ ಹಾಗೂ ಅದಕ್ಕಾಗಿ ಐತಿಹಾಸಿಕ ಲಾಲ್‌ಬಾಗ್‌ನ ಜಾಗವನ್ನು ಬಳಸಿಕೊಳ್ಳುವ ಸರ್ಕಾರದ ಚಿಂತನೆ ಪರಿಸರವಾದಿಗಳ ಕೆಂಗಣ್ಣಿಗೆ ಗುರಿಯಾಯಿತು. ಇದೇ ಕಾರಣಕ್ಕೆ ಶೇಕಡಾ 5ರಷ್ಟು ಉದ್ಯಾನವನಗಳ ಜಾಗವನ್ನು ಸಾರ್ವಜನಿಕ ಮೂಲಸೌಕರ್ಯಗಳಿಗೆ ಬಳಸಿಕೊಳ್ಳಲು ಅವಕಾಶ ನೀಡುವ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) ತಿದ್ದುಪಡಿ ಮಸೂದೆಯನ್ನು ಸರ್ಕಾರ ಮಂಡಿಸಿತ್ತು. ಇದರ ವಿರುದ್ಧ ಸಾವಿರಾರು ನಾಗರಿಕರು ಬೃಹತ್ ಪ್ರತಿಭಟನೆ ನಡೆಸಿದರು. ಜನರ ಆಕ್ರೋಶಕ್ಕೆ



ತಲೆಬಾಗಿದ ಸರ್ಕಾರ, ವಿವಾದಾತ್ಮಕ ಮಸೂದೆಯನ್ನು ಮತ್ತು ಉದ್ಯಾನವನಗಳ ಜಾಗವನ್ನು ವಶಪಡಿಸಿಕೊಳ್ಳುವ ನಿರ್ಧಾರವನ್ನು ಹಿಂಪಡೆಯುವ ಮೂಲಕ ಜನಪರ ನಿಲುವನ್ನು ಪ್ರದರ್ಶಿಸಿದೆ.

ಇದರ ಜೊತೆಗೆ, ರಾಮನಗರ ಜಿಲ್ಲೆಯಲ್ಲಿ ಪ್ರಸ್ತಾಪಿಸಲಾದ 9,600 ಎಕರೆ ವಿಸ್ತೀರ್ಣದ ಬೃಹತ್ ಬಿಡದಿ ಟೌನ್‌ಶಿಪ್ ನಿರ್ಮಾಣ ಯೋಜನೆ ಕೂಡ ಭಾರಿ ವಿರೋಧ ಹುಟ್ಟುಹಾಕಿತು. ಫಲವತ್ತಾದ ಕೃಷಿ ಭೂಮಿಯನ್ನು ವಶಪಡಿಸಿಕೊಳ್ಳುವ ಸರ್ಕಾರದ ಕ್ರಮವನ್ನು ವಿರೋಧಿಸಿ ರೈತರು ಬರೋಬ್ಬರಿ 540ಕ್ಕೂ ಹೆಚ್ಚು ದಿನಗಳ ಕಾಲ ನಿರಂತರ ಪ್ರತಿಭಟನೆ ನಡೆಸಿದರು. ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡು ರಾಜಕೀಯ ತಿರುವು ಪಡೆಯುತ್ತಿದ್ದಂತೆಯೇ ಎಚ್ಚೆತ್ತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪತ್ರಿಕಾಗೋಷ್ಠಿ ನಡೆಸಿದರು. ರೈತರ ಒಪ್ಪಿಗೆಯಿಲ್ಲದೆ ಬಲವಂತವಾಗಿ ಯಾವುದೇ ಭೂಮಿಯನ್ನು ವಶಪಡಿಸಿಕೊಳ್ಳುವುದಿಲ್ಲ, ಬದಲಾಗಿ ಯಾರು ಸ್ವಯಂಪ್ರೇರಿತವಾಗಿ ಜಮೀನು ನೀಡುತ್ತಾರೋ ಅವರಿಂದ ಮಾತ್ರ ಪಡೆಯಲಾಗುವುದು ಎಂದು ಹೇಳಿದರು. ಯೋಜನೆಯನ್ನು ಕೈಬಿಡುವ ಯಾವುದೇ ಇರಾದೆ ತೋರದಿದ್ದರೂ, ವಿವಾದದ ತೀವ್ರತೆ ಹೆಚ್ಚಾಗುವ ಮುನ್ನವೇ ಸರ್ಕಾರ ತನ್ನ ನಿರ್ಧಾರವನ್ನು ಭಾಗಶಃ ಬದಲಿಸಿಕೊಂಡಿತು.

ಈ ರೀತಿಯ ಸಕಾರಾತ್ಮಕ ಸ್ಪಂದನೆ ಮತ್ತು ತಪ್ಪು ತಿದ್ದಿಕೊಳ್ಳುವ ಪ್ರವೃತ್ತಿಯ ನಡುವೆಯೂ, ಸರ್ಕಾರದ ಕೆಲವು ಆರಂಭಿಕ ಆಡಳಿತಾತ್ಮಕ ವಿಳಂಬಗಳು ವಿರೋಧ ಪಕ್ಷಗಳ ಟೀಕೆಗೆ ಗುರಿಯಾದವು. ಇಂದು ಸರ್ಕಾರದಿಂದ ಬಿಡುಗಡೆಯಾಗಿರುವ ಜಾಹೀರಾತಿನಲ್ಲೂ ತನ್ನನ್ನು ಜನಾಭಿಪ್ರಾಯಕ್ಕೆ ಬೆಲೆ ಕೊಡುವ ಸರ್ಕಾರ ಎಂದು ಬಿಂಬಿಸಿಕೊಂಡಿದೆ. ಆ ಮೂಲಕ ಯೂ ಟರ್ನ್ ಸರ್ಕಾರ ಎಂಬುದಕ್ಕಿಂತ ಸಂವೇದನೆಯಿರುವ ಸರ್ಕಾರ ಎಂದು ಹೇಳುವುದು ಅವರ ಯೋಚನೆಯಿದ್ದಂತಿದೆ.

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಸಚಿವ ಸಂಪುಟ ವಿಸ್ತರಣೆ ಮಾಡಲು ಕಾಂಗ್ರೆಸ್ ಹೈಕಮಾಂಡ್ ಬರೋಬ್ಬರಿ ಒಂದು ತಿಂಗಳು ವಿಳಂಬ ಮಾಡಿತು. ಆ ಬಳಿಕ ಖಾತೆ ಹಂಚಿಕೆ ಪ್ರಕ್ರಿಯೆ ಕೂಡ ಬಹಳ ತಡವಾಯಿತು. ಈ ಎಲ್ಲ ಪ್ರಮುಖ ರಾಜಕೀಯ ಮತ್ತು ಆಡಳಿತಾತ್ಮಕ ತೀರ್ಮಾನಗಳು ಕೇವಲ ದೆಹಲಿ ಮಟ್ಟದಲ್ಲಿಯೇ ನಿರ್ಧಾರವಾಗುತ್ತಿದ್ದವು. ರಾಜ್ಯದಲ್ಲಿ ಅಧಿಕಾರ ವಿಕೇಂದ್ರೀಕರಣದ ಬದಲು ದೆಹಲಿ ನಾಯಕರ ಕೈಯಲ್ಲಿ ಅಧಿಕಾರ ಕೇಂದ್ರೀಕರಣವಾಗಿದೆ ಎಂಬ ಅಸಮಾಧಾನ ವ್ಯಾಪಕವಾಗಿ ವ್ಯಕ್ತವಾಯಿತು. ಇದು ಒಂದು ಹೊಸ ಮತ್ತು ಸ್ವತಂತ್ರ ಸರ್ಕಾರದ ಲಕ್ಷಣವಲ್ಲ ಎಂಬ ಭಾವನೆ ಮೂಡಲು ಈ ವಿಳಂಬ ಧೋರಣೆಯೇ ಪ್ರಮುಖ ಕಾರಣವಾಯಿತು.ಸಚಿವರ ಕಾರ್ಯವೈಖರಿಯನ್ನು ಕೂಲಂಕಷವಾಗಿ ಗಮನಿಸಿದಾಗ, ಸಂಪುಟದ ಕೆಲವು ಸಚಿವರ ಕೆಲಸಗಳು ಭಿನ್ನವಾಗಿ ಎದ್ದುಕಾಣುತ್ತಿವೆ. ಪ್ರಮುಖವಾಗಿ ಸಚಿವ ಕೃಷ್ಣ ಬೈರೇಗೌಡರು ಬೆಂಗಳೂರು ಅಭಿವೃದ್ಧಿ ವಿಚಾರದಲ್ಲಿ ಹೆಚ್ಚು ಸಕ್ರಿಯವಾಗಿ ತೊಡಗಿಸಿಕೊಂಡಿರುವುದು ಸರ್ಕಾರದ ಪಾಲಿಗೆ ದೊಡ್ಡ ಸಕಾರಾತ್ಮಕ ಬೆಳವಣಿಗೆಯಾಗಿದೆ.

ಸಾಮಾನ್ಯವಾಗಿ, ಹಿಂದಿನ ಸರ್ಕಾರಗಳಿಗೆ ಬೆಂಗಳೂರು ನಗರದ ಅಭಿವೃದ್ಧಿ ಎಂಬುದು ಒಂದು ಬಹುದೊಡ್ಡ ದೌರ್ಬಲ್ಯವಾಗಿತ್ತು . ಆದರೆ, ಪ್ರಸ್ತುತ ಸರ್ಕಾರವು ಈ ನಿಟ್ಟಿನಲ್ಲಿ ವಿಶೇಷ ಗಮನ ಹರಿಸಿದ್ದು, ಆಡಳಿತಾತ್ಮಕ ಲೋಪಗಳನ್ನು ಸರಿಪಡಿಸುವ ಕಡೆಗೆ ದಿಟ್ಟ ಹೆಜ್ಜೆ ಇಡುತ್ತಿದೆ. ಕೃಷ್ಣ ಬೈರೇಗೌಡರು ಪೌರ ಕಾರ್ಮಿಕರ ಸಮಸ್ಯೆಗಳ ನಿರ್ವಹಣೆ ಹಾಗೂ ಬಿಬಿಎಂಪಿ ವ್ಯಾಪ್ತಿಯ ಫುಟ್‌ಪಾತ್ ಮೇಲಿರುವ ಬೀದಿ ವ್ಯಾಪಾರಿಗಳ ತೆರವು ಕಾರ್ಯಾಚರಣೆಯಂತಹ ವಿಚಾರಗಳಲ್ಲಿ ತಳೆದ ನಿಲುವು, ಟೀಕೆಗಳಿಗೆ ಗುರಿಯಾಗಿದ್ದರೂ ಸಹ ತಮ್ಮ ಛಾಪು ಮೂಡಿಸುವ ಯತ್ನದಲ್ಲಿದ್ದಾರೆ.

ಮತ್ತೊಂದೆಡೆ, ಸಚಿವ ಸಂಪುಟದಲ್ಲಿ ಅತ್ಯಂತ ಹೆಚ್ಚು ಸದ್ದು ಮಾಡುತ್ತಿರುವ ಮತ್ತೊಬ್ಬ ಸಚಿವರೆಂದರೆ ಪ್ರಿಯಾಂಕ್ ಖರ್ಗೆ. ಅವರು ಸಂಪೂರ್ಣವಾಗಿ ಸೈದ್ಧಾಂತಿಕ ನೆಲೆಗಟ್ಟಿನಲ್ಲಿ ಗುರುತಿಸಿಕೊಂಡಿದ್ದು, ವಿಶೇಷವಾಗಿ ಆರ್.ಎಸ್.ಎಸ್ () ಮತ್ತು ಇತರ ವಿಚಾರಗಳನ್ನು ಮುಂದಿಟ್ಟುಕೊಂಡು ವಿರೋಧ ಪಕ್ಷಗಳನ್ನು ಅತ್ಯಂತ ಆಕ್ರಮಣಕಾರಿಯಾಗಿ ಎದುರಿಸುತ್ತಿದ್ದಾರೆ. ಇವರ ಜೊತೆಗೆ, ವಿಧಾನಸಭೆಯ ಸ್ಪೀಕರ್ ಸ್ಥಾನಕ್ಕೆ ರಾಜೀನಾಮೆ ನೀಡಿ ನೂತನ ಸಂಪುಟದಲ್ಲಿ ಆರೋಗ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಯು.ಟಿ. ಖಾದರ್ ಅವರು ಕೂಡ ತಮ್ಮ ಇಲಾಖೆಯಲ್ಲಿ ಚುರುಕಿನಿಂದ ಕೆಲವು ಸಕಾರಾತ್ಮಕ ಕೆಲಸಗಳನ್ನು ಮಾಡುವ ಮೂಲಕ ಎದ್ದು ಕಾಣುತ್ತಿದ್ದಾರೆ. ವಿಶೇಷವಾಗಿ, ಹೋಟೆಲ್‌ಗಳ ನೈರ್ಮಲ್ಯ, ಸ್ವಚ್ಛತೆ ಹಾಗೂ ಸಾರ್ವಜನಿಕರ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸುವ ನಿಟ್ಟಿನಲ್ಲಿ ಅವರು ತೆಗೆದುಕೊಳ್ಳುತ್ತಿರುವ ಕಟ್ಟುನಿಟ್ಟಿನ ಕ್ರಮಗಳು ಸಾರ್ವಜನಿಕರ ಗಮನ ಸೆಳೆದಿವೆ. ಈ ಮೂವರನ್ನು ಹೊರತುಪಡಿಸಿದರೆ, ಉಳಿದ ಬಹುತೇಕ ಸಚಿವರುಗಳ ನೈಜ ಸಾಧನೆಗಳನ್ನು ಇನ್ನಷ್ಟೇ ಕಾದು ನೋಡಬೇಕಾಗಿದೆ. ಇದು ಸರ್ಕಾರದ ಆಡಳಿತದ ವಿವಿಧ ಆಯಾಮಗಳನ್ನು ಅನಾವರಣಗೊಳಿಸಿದೆ.

ಸರ್ಕಾರದ ಮೊದಲ ಮೂರು ತಿಂಗಳ ಆಡಳಿತವನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಇದು ಸಂಪೂರ್ಣವಾಗಿ ನಗರ ಕೇಂದ್ರಿತ ಅಥವಾ ಕೇವಲ ಬೆಂಗಳೂರು ಕೇಂದ್ರಿತ ಸರ್ಕಾರ ಎಂಬಂತೆ ಕಾಣುತ್ತಿತ್ತು. ಗ್ರಾಮೀಣ ಭಾಗವನ್ನು ನಿರ್ಲಕ್ಷ್ಯ ಮಾಡಲಾಗುತ್ತಿದೆ ಎಂಬ ಅಸಮಾಧಾನ ಶುರುವಾಗುವ ಸಾಧ್ಯತೆಯೂ ಇತ್ತು. ಆದರೆ, ಇಂದಿನ ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಕೃಷಿ ವಲಯವನ್ನು ಗುರಿಯಾಗಿಸಿಕೊಂಡು ಹಲವು ಯೋಜನೆಗಳನ್ನು ಪ್ರಕಟಿಸುವ ಮೂಲಕ ಸಮತೋಲನ ಕಾಯ್ದುಕೊಳ್ಳುವ ಯತ್ನ ಮಾಡಿದೆ. ತೀವ್ರ ಬರ ಕಾಡುವ ವರ್ಷದಲ್ಲಿ ಇದಿಷ್ಟೇ ಸಾಕೇ ಎಂಬ ಪ್ರಶ್ನೆ ಹೇಗೂ ಇದ್ದೇ ಇದೆ. ಇದೇ ವೇಳೆ ಶಿಕ್ಷಣ ಕ್ಷೇತ್ರಕ್ಕೆ ಅತ್ಯಂತ ಹೆಚ್ಚಿನ ಒತ್ತು ನೀಡಲಾಗಿದ್ದು, ಗ್ರಾಮೀಣ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶೇ. 7.5ರಷ್ಟು ಮೀಸಲಾತಿ, 1,000 ಕರ್ನಾಟಕ ಪಬ್ಲಿಕ್ ಶಾಲೆಗಳ ಅಭಿವೃದ್ಧಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿಎಂ ವಿದ್ಯಾರ್ಥಿ ಸಹಾಯ ಹಸ್ತ ಯೋಜನೆಯಡಿ ಉಚಿತ ತರಬೇತಿಯನ್ನು ಘೋಷಿಸಲಾಗಿದೆ.

ಶಿಕ್ಷಣದ ಜೊತೆಗೆ ಕೃಷಿ ವಲಯಕ್ಕೂ ಇಂದಿನ ಕಾರ್ಯಕ್ರಮದಲ್ಲಿ ಬಂಪರ್ ಕೊಡುಗೆಗಳನ್ನು ನೀಡಲಾಗಿದೆ. ರೈತರು, ಗ್ರಾಮ ಸಮೃದ್ಧಿ ಮತ್ತು ಕೃಷಿ ಪರಿಕಲ್ಪನೆಯಡಿ, ರೈತರ ಏಳಿಗೆಗಾಗಿ ಮುಖ್ಯಮಂತ್ರಿ ನೇಗಿಲ ಯೋಗಿ ಯೋಜನೆ, ಗ್ರಾಮೀಣ ಬದುಕಿನ ನೈಜ ಪರಿಚಯಕ್ಕಾಗಿ ಗ್ರಾಮಾನುಭವ, ಹಾಗೂ ಕರಾವಳಿ-ಮಲೆನಾಡು ಭಾಗಕ್ಕೆ ತೆಂಗಿನ ಸಿರಿ ಯೋಜನೆ ಪ್ರಕಟಿಸಲಾಗಿದೆ. ಆಧುನಿಕ ಕೃಷಿಗಾಗಿ ಸಿಎಂ ರೈತ ಚೈತನ್ಯ ಡಿಜಿಟಲ್ ಅಗ್ರಿ-ಟೆಕ್ ಮಿಷನ್, ರಫ್ತಿಗೆ ಉತ್ತೇಜನ ನೀಡಲು ಕೃಷಿ ರಫ್ತು ಮಿಷನ್ ಪುನರ್ರಚನೆ, ಹವಾಮಾನ ಆಧಾರಿತ ಒಣಭೂಮಿ ಕೃಷಿ ನೀತಿ ಮತ್ತು ಪೌಷ್ಟಿಕಾಂಶ ವೃದ್ಧಿಗೆ ಕರ್ನಾಟಕ ಪ್ರೋಟೀನ್ ಮಿಷನ್‌ನಂತಹ ದೀರ್ಘಕಾಲೀನ ಯೋಜನೆಗಳನ್ನು ಘೋಷಿಸಲಾಗಿದೆ. ಇದೆಲ್ಲಕ್ಕೂ ಮಿಗಿಲಾಗಿ, ಸೂರು ಇಲ್ಲದ ಬಡವರ ನೆರವಿಗಾಗಿ ನಿವೇಶನ ರಹಿತ ಕುಟುಂಬಗಳಿಗೆ ಸೈಟ್ ಒದಗಿಸುವ ಮಹತ್ವದ ಭರವಸೆಯನ್ನು ಸರ್ಕಾರ ನೀಡಿದೆ.

ಡಿ.ಕೆ. ಶಿವಕುಮಾರ್ ಸರ್ಕಾರದ ನೂರು ದಿನಗಳ ಆಡಳಿತವು ರಾಜಕೀಯವಾಗಿ ಕೆಲವು ಏರಿಳಿತಗಳನ್ನು ಕಂಡಿದ್ದರೂ, ತನ್ನ ತಪ್ಪುಗಳನ್ನು ಬೇಗನೆ ತಿದ್ದಿಕೊಳ್ಳುವ ಜಾಣ್ಮೆ ತೋರುವ ಮೂಲಕ ಭರವಸೆ ಮೂಡಿಸಿದೆ. ಆದರೆ, ನೂರು ದಿನಗಳ ಸಂಭ್ರಮದಲ್ಲಿ ಬಿಡುಗಡೆಯಾಗಿರುವ ಈ ಹತ್ತಾರು ಮಹತ್ವಾಕಾಂಕ್ಷಿ ಘೋಷಣೆಗಳು ಕೇವಲ ಕಾಗದದ ಮೇಲಿನ ಪ್ರಚಾರದ ಸರಕಾಗದೆ ವಾಸ್ತವದಲ್ಲಿ ಎಷ್ಟರಮಟ್ಟಿಗೆ ಅನುಷ್ಠಾನಗೊಳ್ಳುತ್ತವೆ ಎಂಬುದು ಅತಿಮುಖ್ಯ ಪ್ರಶ್ನೆಯಾಗಿದೆ. ಈ ಎಲ್ಲಾ ಬೃಹತ್ ಯೋಜನೆಗಳನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರಲು ಬೇಕಾದ ಆಡಳಿತಾತ್ಮಕ ಇಚ್ಛಾಶಕ್ತಿ ಹಾಗೂ ಅಪಾರ ಆರ್ಥಿಕ ಸಂಪನ್ಮೂಲವನ್ನು ಒದಗಿಸುವುದು ಸರ್ಕಾರದ ಮುಂದಿರುವ ಬಹುದೊಡ್ಡ ಸವಾಲಾಗಿದೆ. ಈ ಯೋಜನೆಗಳು ಕಟ್ಟಕಡೆಯ ಮನುಷ್ಯನಿಗೆ ತಲುಪಿದಾಗ ಮಾತ್ರ ಈ ನವೀನ ಸರ್ಕಾರದ ನೈಜ ಯಶಸ್ಸು ನಿರ್ಧಾರವಾಗಲಿದೆ.

ಐಫೋನ್ 18 ಪ್ರೊ ಸರಣಿ ಬಿಡುಗಡೆ: ಭಾರತದಲ್ಲಿ ಹಳೆಯ ಐಫೋನ್ ಮಾದರಿಗಳ ಬೆಲೆ ಭಾರಿ ಏರಿಕೆ

ಆ್ಯಪಲ್ ಕಂಪನಿಯು ತನ್ನ ನೂತನ ಐಫೋನ್ 18 ಪ್ರೊ ಸರಣಿಯನ್ನು ಮಾರುಕಟ್ಟೆಗೆ ಪರಿಚಯಿಸಿದೆ. ಈ ಹೊಸ ಸರಣಿಯ ಬಿಡುಗಡೆಯ ಬೆನ್ನಲ್ಲೇ, ಭಾರತದಲ್ಲಿ ತನ್ನ ಹಿಂದಿನ ಆವೃತ್ತಿಗಳಾದ ಐಫೋನ್ 16, ಐಫೋನ್ 17, ಐಫೋನ್ 17 ಹಾಗೂ ಐಫೋನ್ ಏರ್ ಸ್ಮಾರ್ಟ್‌ಫೋನ್‌ಗಳ ಬೆಲೆಯನ್ನು ಕಂಪನಿಯು ಗಣನೀಯವಾಗಿ ಹೆಚ್ಚಿಸಿದೆ. ಬೆಲೆ ಏರಿಕೆಯ ಈ ಹೊಸ ದರ ಪಟ್ಟಿಯು ಅಮೆರಿಕದ ಅಧಿಕೃತ ವೆಬ್‌ಸೈಟ್‌ನಲ್ಲೂ ಈಗಾಗಲೇ ಪ್ರತಿಫಲಿಸಿದೆ.

ಹೊಸ ದರಗಳ ಅನ್ವಯ, ಮೂಲ ಐಫೋನ್ 17ರ (256) ಆವೃತ್ತಿಯ ಬಿಡುಗಡೆ ಬೆಲೆ ₹82,900 ಇತ್ತು, ಇದೀಗ ಅದು ₹17,000 ಏರಿಕೆಯಾಗಿ ₹99,900ಕ್ಕೆ ತಲುಪಿದೆ. ಇದರ 512 ಆವೃತ್ತಿಯ ಬೆಲೆ ಈಗ ₹1,24,900 ನಿಗದಿಯಾಗಿದೆ. ಈ ಫೋನ್ ಮಿಸ್ಟ್ ಬ್ಲೂ, ಸೇಜ್, ಲ್ಯಾವೆಂಡರ್, ಕಪ್ಪು ಮತ್ತು ಬಿಳಿ ಸೇರಿದಂತೆ ಐದು ಬಣ್ಣಗಳಲ್ಲಿ ಲಭ್ಯವಿದೆ.

ಅವಳಿಯಾಗಿ ಹುಟ್ಟಿದ್ದು ತಪ್ಪೇ? ನಾಗರಿಕತ್ವವನ್ನು ಪ್ರತಿದಿನ ಸಾಬೀತುಪಡಿಸಬೇಕಾದ ಕಾಲವೇ...

ಶಿವಕುಮಾರ್ ಆಡಳಿತಕ್ಕೆ 100 ದಿನ: ವೇಗ, ಮಹತ್ವಾಕಾಂಕ್ಷೆ, ತಪ್ಪು...

ಅದೇ ರೀತಿ, ಎಂಟ್ರಿ-ಲೆವೆಲ್ ಐಫೋನ್ 17 ಮಾದರಿಯ ಬೆಲೆ ₹15,000 ಹೆಚ್ಚಳ ಕಂಡು ₹64,900 ರಿಂದ ₹79,900ಕ್ಕೆ ಏರಿಕೆಯಾಗಿದೆ. ಹಳೆಯ ಐಫೋನ್ 16ರ ಬೆಲೆಯಲ್ಲಿ ₹10,000 ಹೆಚ್ಚಳವಾಗಿದ್ದು, ₹79,900 ರಿಂದ ₹89,900ಕ್ಕೆ ತಲುಪಿದೆ. ಗರಿಷ್ಠ ಬೆಲೆ ಏರಿಕೆಯು ಅಲ್ಟ್ರಾ-ಥಿನ್ ಐಫೋನ್ ಏರ್ ಮಾದರಿಯಲ್ಲಿ ಕಂಡುಬಂದಿದ್ದು, ಬರೋಬ್ಬರಿ ₹30,000 ದರ ಹೆಚ್ಚಳದೊಂದಿಗೆ ಅದರ ಆರಂಭಿಕ ಬೆಲೆ ₹1,19,900 ರಿಂದ ₹1,49,900ಕ್ಕೆ ಏರಿಕೆಯಾಗಿದೆ.

ಐಫೋನ್ 17 ಸ್ಮಾರ್ಟ್‌ಫೋನ್ 6.3-ಇಂಚಿನ ಡಿಸ್‌ಪ್ಲೇ ಹೊಂದಿದ್ದು, ಈ ಹಿಂದೆ ಕೇವಲ ಹೈ-ಎಂಡ್ ಪ್ರೊ-ಮಾದರಿಗಳಿಗೆ ಮಾತ್ರ ಸೀಮಿತವಾಗಿದ್ದ 120 ರಿಫ್ರೆಶ್ ರೇಟ್ ಅನ್ನು ಇದರಲ್ಲಿ ನೀಡಲಾಗಿದೆ. ಇದು 3,000 ನಿಟ್ಸ್ ಗರಿಷ್ಠ ಬ್ರೈಟ್‌ನೆಸ್ ಹಾಗೂ ಆಲ್‌ವೇಸ್-ಆನ್ ಡಿಸ್‌ಪ್ಲೇ ಸೌಲಭ್ಯವನ್ನು ಹೊಂದಿದೆ. ಗೀರುಗಳಿಂದ ರಕ್ಷಿಸಲು ಸೆರಾಮಿಕ್ ಶೀಲ್ಡ್ 2 ಗ್ಲಾಸ್ ಹಾಗೂ ಸೂರ್ಯನ ಬೆಳಕಿನ ಪ್ರಖರತೆ ತಡೆಯಲು ಆಂಟಿ-ರಿಫ್ಲೆಕ್ಟಿವ್ ಲೇಯರ್ ಅಳವಡಿಸಲಾಗಿದೆ.

ಮುಂಬರುವ ಕೃತಕ ಬುದ್ಧಿಮತ್ತೆ () ಫೀಚರ್‌ಗಳನ್ನು ಬೆಂಬಲಿಸಲು ಹಾಗೂ ಅತ್ಯುತ್ತಮ ಗೇಮಿಂಗ್ ಅನುಭವ ನೀಡಲು ಇದರಲ್ಲಿ 19 ಪ್ರೊಸೆಸರ್ ಬಳಸಲಾಗಿದೆ. ಕ್ಯಾಮೆರಾ ವಿಭಾಗದಲ್ಲಿ, ಹಿಂಭಾಗದಲ್ಲಿ ಆಪ್ಟಿಕಲ್ 2 ಟೆಲಿಫೋಟೊ ಕ್ರಾಪ್ ಜೊತೆಗೆ 48 ಪ್ರೈಮರಿ ಸೆನ್ಸಾರ್ ಹಾಗೂ ಅತ್ಯಂತ ಸ್ಪಷ್ಟ ಚಿತ್ರಗಳನ್ನು ಸೆರೆಹಿಡಿಯುವ 48 ಅಲ್ಟ್ರಾ-ವೈಡ್ ಕ್ಯಾಮೆರಾ ನೀಡಲಾಗಿದೆ. ಮುಂಭಾಗದಲ್ಲಿ 18 ಚೌಕಾಕಾರದ ಕ್ಯಾಮೆರಾ ಅಳವಡಿಸಲಾಗಿದ್ದು, ಫೋನ್ ಅನ್ನು ಅಡ್ಡಲಾಗಿ ತಿರುಗಿಸದೆಯೇ ವೈಡ್ ಲ್ಯಾಂಡ್‌ಸ್ಕೇಪ್ ಭಾವಚಿತ್ರಗಳನ್ನು ತೆಗೆಯಬಹುದಾಗಿದೆ. ಜೊತೆಗೆ ವಿಡಿಯೊ ಕರೆಗಳಲ್ಲಿ ವ್ಯಕ್ತಿಯನ್ನು ಕೇಂದ್ರದಲ್ಲಿರಿಸುವ ಸೆಂಟರ್ ಸ್ಟೇಜ್ ಫೀಚರ್ ಸೇರ್ಪಡೆಯಾಗಿದೆ. ಐಫೋನ್ 16 ಗಿಂತ 8 ಗಂಟೆ ಹೆಚ್ಚಿನ, ಅಂದರೆ ಬರೋಬ್ಬರಿ 30 ಗಂಟೆಗಳ ವಿಡಿಯೊ ಪ್ಲೇಬ್ಯಾಕ್ ಸಾಮರ್ಥ್ಯವನ್ನು ಇದು ಹೊಂದಿದೆ ಎಂದು ಆ್ಯಪಲ್ ತಿಳಿಸಿದೆ.

ಅತ್ಯಾಧುನಿಕ ಐಫೋನ್ ಏರ್ ಮಾದರಿಯು 6.5-ಇಂಚಿನ ಸೂಪರ್ ರೆಟಿನಾ ಡಿಸ್‌ಪ್ಲೇ, 120 ಪ್ರೊಮೋಷನ್, ಆಲ್‌ವೇಸ್-ಆನ್, ಡೈನಾಮಿಕ್ ಐಲ್ಯಾಂಡ್ ಮತ್ತು 3,000 ನಿಟ್ಸ್ ಗರಿಷ್ಠ ಬ್ರೈಟ್‌ನೆಸ್ ಹೊಂದಿದೆ. ಇದು ಅತ್ಯಂತ ಪ್ರಬಲವಾದ 19 ಪ್ರೊ ಚಿಪ್‌ನಿಂದ ಕಾರ್ಯನಿರ್ವಹಿಸುತ್ತದೆ. ಹಿಂಭಾಗದಲ್ಲಿ 48 ಫ್ಯೂಷನ್ ಕ್ಯಾಮೆರಾ ಮತ್ತು ಮುಂಭಾಗದಲ್ಲಿ 18 ಸೆಂಟರ್ ಸ್ಟೇಜ್ ಕ್ಯಾಮೆರಾ ಒಳಗೊಂಡಿದೆ. 27 ಗಂಟೆಗಳ ವಿಡಿಯೊ ಪ್ಲೇಬ್ಯಾಕ್ ಸಾಮರ್ಥ್ಯದ ಬ್ಯಾಟರಿ ಇದರಲ್ಲಿದ್ದು, ವೇಗದ ಹಾಗೂ ವೈರ್‌ಲೆಸ್ ಚಾರ್ಜಿಂಗ್ ಸೌಲಭ್ಯವನ್ನು ಬೆಂಬಲಿಸುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR